ಸಂಪುಟ: 11 ಸಂಚಿಕೆ: 169 ಪುಟ: 4+2 ಬೆಲೆ : 3.00 ಶನಿವಾರ, ಆಗಸ್ಟ್ 08, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 169 Pages : 4+2 Rate : 3.00 Saturday, August 08, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಬೆಳೆ ವಿಮೆ, ಪರಿಹಾರ ವಿಳಂಬವಾಗದಂತೆ ಅಧಿಕಾರಿಗಳಿಗೆ ಸಚಿವ ರಾಯರಡ್ಡಿ ಕಟ್ಟುನಿಟ್ಟಿನ ಎಚ್ಚರಿಕೆ

# ರೈತರಿಗೆ ಅನ್ಯಾಯ ಸಹಿಸುವುದಿಲ್ಲ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ನರಗುಂದ ತಾಲೂಕು ಹೊರತುಪಡಿಸಿ ಉಳಿದ ಎಲ್ಲ ತಾಲೂಕುಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದು, ಬರಪೀಡಿತ ಪ್ರದೇಶವೆಂದು ಘೋಷಿಸಲು ಪೂರಕ ವಾತಾವರಣ ನಿರ್ಮಾಣವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ತಿಳಿಸಿದ್ದಾರೆ.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಬರ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿರ್ದೇಶನದಂತೆ ಜಿಲ್ಲೆಯ ಪ್ರತಿ ತಾಲೂಕಿಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದರು.

ಅಧಿಕಾರಿಗಳು ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರದೆ ಕ್ರಿಯಾಶೀಲರಾಗಿ ಕೆಲಸ ಮಾಡಬೇಕು. ಸಭೆಗಳಿಗೆ ಇಲಾಖೆಗೆ ಸಂಬಂಧಿಸಿದ ಮಾಹಿತಿ ಸ್ಪಷ್ಟ ಹಾಗೂ ನಿಖರವಾಗಿರಬೇಕು. ರೈತರಿಗೆ ಸಿಗಬೇಕಾದ ಸೌಲಭ್ಯಗಳು ಯಾವುದೇ ಕಾರಣಕ್ಕೂ ತಪ್ಪಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.




ನರಗುಂದ ತಾಲೂಕಿನಲ್ಲಿ ಸದ್ಯ ವಾಡಿಕೆಗಿಂತ ಶೇ.18 ರಷ್ಟು ಹೆಚ್ಚು ಮಳೆಯಾಗಿದೆ. ಆದರೆ ಮುಂದಿನ ಒಂದು ವಾರದಲ್ಲೂ ಮಳೆಯಾಗದಿದ್ದರೆ ನಿಯಮಾನುಸಾರ ಪರಿಶೀಲನೆ ನಡೆಸಿ ನರಗುಂದವನ್ನೂ ಬರಪೀಡಿತ ಪ್ರದೇಶವೆಂದು ಘೋಷಿಸುವ ಕುರಿತು ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಹೇಳಿದರು. ಜಿಲ್ಲೆಯಲ್ಲಿ ಕೃಷಿ ಕ್ಷೇತ್ರದಲ್ಲಿ ಶೇ.89.39 ಹಾಗೂ ತೋಟಗಾರಿಕೆ ಕ್ಷೇತ್ರದಲ್ಲಿ ಶೇ.126.21ರಷ್ಟು ಬಿತ್ತನೆಯಾಗಿದ್ದು, ಒಟ್ಟಾರೆ ಶೇ.90.65ರಷ್ಟು ಬಿತ್ತನೆ ಪೂರ್ಣಗೊಂಡಿದೆ. ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯ ತಾಂತ್ರಿಕ ಸಮಸ್ಯೆಗಳನ್ನು ತ್ವರಿತವಾಗಿ ಸರಿಪಡಿಸಿ, ಅರ್ಹ ರೈತರಿಗೆ ಬೆಳೆ ವಿಮೆ ಹಾಗೂ ಪರಿಹಾರ ಸೌಲಭ್ಯ ತಲುಪಿಸಬೇಕು. ರೈತರ ಹಿತಾಸಕ್ತಿಗೆ ಧಕ್ಕೆಯಾಗುವಂತಹ ಯಾವುದೇ ನಿರ್ಲಕ್ಷ್ಯವನ್ನು ಸಹಿಸುವುದಿಲ್ಲ ಎಂದು ಎಚ್ಚರಿಸಿದರು.

ಸಭೆಯಲ್ಲಿ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಅವರು ಸುಗ್ನಳ್ಳಿ ಡಿಬಿಓಟಿ ಯೋಜನೆಯ ನೀರಿನ ಗುಣಮಟ್ಟ ಪರೀಕ್ಷೆ ನಡೆಸುವಂತೆ ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಸಚಿವರು, ಒಂದು ವಾರದೊಳಗೆ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಗದಗ ಶಾಸಕ ಎಚ್.ಕೆ. ಪಾಟೀಲ ಮಾತನಾಡಿ, ಪಿಎಂ ಫಸಲ್ ಬಿಮಾ ಯೋಜನೆಯ ಸೌಲಭ್ಯ ಎಲ್ಲ ಅರ್ಹ ರೈತರಿಗೆ ತಲುಪಬೇಕು. ಬಿತ್ತನೆ ಮಾಡಲಾಗದೆ ಬೀಜ ಹಾಗೂ ರಸಗೊಬ್ಬರ ಖರೀದಿಸಿ ನಷ್ಟ ಅನುಭವಿಸಿರುವ ರೈತರಿಗೂ ಪರಿಹಾರ ಕಲ್ಪಿಸುವ ಕುರಿತು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾಹಿತಿ ನೀಡಿ, ಜೂನ್ 1ರಿಂದ ಆಗಸ್ಟ್ 5ರವರೆಗೆ ಜಿಲ್ಲೆಯಲ್ಲಿ ವಾಡಿಕೆ 171.3 ಮಿ.ಮೀ. ಮಳೆಯ ಬದಲಿಗೆ ಕೇವಲ 118.50 ಮಿ.ಮೀ. ಮಳೆಯಾಗಿದ್ದು, ಶೇ.31ರಷ್ಟು ಮಳೆ ಕೊರತೆಯಾಗಿದೆ ಎಂದರು. ಗದಗ, ಮುಂಡರಗಿ, ರೋಣ, ಶಿರಹಟ್ಟಿ, ಗಜೇಂದ್ರಗಡ ಹಾಗೂ ಲಕ್ಷ್ಮೇಶ್ವರ ತಾಲೂಕುಗಳಲ್ಲಿ ಬರ ಘೋಷಣೆಗೆ ಪೂರಕ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ವಿವರಿಸಿದರು. ಜಿಲ್ಲೆಯಲ್ಲಿ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳು ಸೇರಿ 164 ಕೋಟಿ ರೂ. ಮೌಲ್ಯದ ಬೆಳೆ ಹಾನಿ ಸಂಭವಿಸಿದ್ದು, 31 ಸ್ಥಳಗಳಲ್ಲಿ ಮೇವು ಬ್ಯಾಂಕ್ ತೆರೆಯಲು ಸಿದ್ಧತೆ ನಡೆಸಲಾಗಿದೆ. ಅಗತ್ಯವಿದ್ದರೆ ತಕ್ಷಣ ಮೇವು ವಿತರಣೆ ಆರಂಭಿಸಲಾಗುವುದು ಎಂದು ತಿಳಿಸಿದರು.

> ರೈತರಿಗೆ ಸಿಗಬೇಕಾದ ಬೆಳೆ ವಿಮೆ ಹಾಗೂ ಪರಿಹಾರದಲ್ಲಿ ಯಾವುದೇ ರೀತಿಯ ಅನ್ಯಾಯವಾಗಬಾರದು. ಅಧಿಕಾರಿಗಳು ಕ್ರಿಯಾಶೀಲರಾಗಿ, ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು.
> – ಬಸವರಾಜ ರಾಯರಡ್ಡಿ, ಸಚಿವ

---

### ಸಚಿವ ಸ್ಥಾನ ಸಿಗದ ನೋವಿಗಿಂತ ಜನಸೇವೆಯ ಸಂಕಲ್ಪ ದೊಡ್ಡದು; ಎಚ್.ಕೆ. ಪಾಟೀಲ

## 100 ದಿನಗಳಲ್ಲಿ ಗದಗ ರಾಜ್ಯಕ್ಕೆ ಮಾದರಿಯಾಗಿಸೋಣ




**ವಿಜಯಸಾಕ್ಷಿ ಸುದ್ದಿ, ಗದಗ**

ಸೇವೆ ಎಂಬುದು ಯಾವುದೇ ಹುದ್ದೆಗಿಂತ ದೊಡ್ಡದು. ಮಂತ್ರಿ ಸ್ಥಾನವೊಂದೇ ಜನಸೇವೆ ಮಾಡುವ ಏಕೈಕ ಮಾರ್ಗವಲ್ಲ. ರಚನಾತ್ಮಕ ಕಾರ್ಯಗಳ ಮೂಲಕ ಗದಗವನ್ನು ಮುಂದಿನ 100 ದಿನಗಳಲ್ಲಿ ರಾಜ್ಯಕ್ಕೆ, ದೇಶಕ್ಕೆ ಮಾದರಿಯಾಗಿಸುವ ಸಂಕಲ್ಪದೊಂದಿಗೆ ಎಲ್ಲ ಕಾರ್ಯಕರ್ತರು ಜನರ ನಡುವೆ ಇಳಿಯಬೇಕು ಎಂದು ಶಾಸಕ ಎಚ್.ಕೆ. ಪಾಟೀಲ ಕರೆ ನೀಡಿದರು. ಸಂಪುಟ ವಿಸ್ತರಣೆ ಬಳಿಕ ಮೊದಲ ಬಾರಿಗೆ ಗದಗಕ್ಕೆ ಆಗಮಿಸಿದ ಎಚ್.ಕೆ. ಪಾಟೀಲ ಅವರನ್ನು ಕಾಂಗ್ರೆಸ್ ಕಾರ್ಯಕರ್ತರು ಅದ್ದೂರಿಯಾಗಿ ಹಾಗೂ ಭಾವನಾತ್ಮಕವಾಗಿ ಸ್ವಾಗತಿಸಿದರು. ಬಳಿಕ ಪಕ್ಷದ ಕಚೇರಿಯಲ್ಲಿ ನಡೆದ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಕಾರ್ಯಕರ್ತರು ನೀಡಿದ ಪ್ರೀತಿ, ಅಭಿಮಾನ ಮತ್ತು ಆತ್ಮೀಯ ಸ್ವಾಗತ ನನಗೆ ನೈತಿಕ ಧೈರ್ಯ ಹಾಗೂ ಹೊಸ ಸ್ಥೈರ್ಯ ತುಂಬಿದೆ. ಆಡಳಿತದಲ್ಲಿ ಪ್ರಾಮಾಣಿಕತೆ, ದಕ್ಷತೆ ಮತ್ತು ಪಾರದರ್ಶಕತೆ ಕಾಣಬೇಕೆಂಬ ಆಶಯ ಹೊಂದಿರುವ ನನ್ನ ಅಭಿಮಾನಿಗಳಿಗೆ ಸಚಿವ ಸ್ಥಾನ ಸಿಗದಿರುವುದು ನೋವುಂಟು ಮಾಡಿರುವುದು ಸಹಜ. ಅವರ ಭಾವನೆಗಳಿಗೆ ನಾನು ತಲೆಬಾಗುತ್ತೇನೆ ಎಂದು ಹೇಳಿದರು. ಕಾಂಗ್ರೆಸ್ ಪಕ್ಷವೇ ನನ್ನ ಸಾರ್ವಜನಿಕ ಬದುಕನ್ನು ರೂಪಿಸಿದೆ. ಆದ್ದರಿಂದ ಸೋನಿಯಾ ಗಾಂಧಿ ಸೇರಿದಂತೆ ಪಕ್ಷದ ಎಲ್ಲ ವರಿಷ್ಠರಿಗೆ ನಾನು ಚಿರಋಣಿಯಾಗಿದ್ದೇನೆ. ಸಮಾಜಸೇವೆ ಮಾಡಲು ಸಚಿವ ಸ್ಥಾನವೇ ಬೇಕೆಂದಿಲ್ಲ. ಸೇವೆಯ ಕ್ಷೇತ್ರ ಅಪಾರವಾಗಿದೆ. ದೊರೆತಿರುವ ಎಲ್ಲ ಅವಕಾಶಗಳನ್ನು ಬಳಸಿಕೊಂಡು ಸಮಾಜದ ಸರ್ವಾಂಗೀಣ ಅಭಿವೃದ್ಧಿ, ಸ್ವಾಭಿಮಾನಿ ಮತ್ತು ಸ್ವಾವಲಂಬಿ ಸಮಾಜ ನಿರ್ಮಾಣಕ್ಕಾಗಿ ಶ್ರಮಿಸೋಣ ಎಂದು ಕಾರ್ಯಕರ್ತರಲ್ಲಿ ಹುಮ್ಮಸ್ಸು ತುಂಬಿದರು. ಪಕ್ಷದ ತತ್ವ-ಸಿದ್ಧಾಂತಗಳನ್ನು ಜನರ ನಡುವೆ ಕೊಂಡೊಯ್ಯುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಬೇಕು. ಯಾರೂ ನಿರಾಶರಾಗದೆ ಜನಸೇವೆಯಲ್ಲಿ ತೊಡಗಿಸಿಕೊಳ್ಳಬೇಕು. ನನ್ನ ಮೇಲಿರುವ ಪ್ರೀತಿ ಮತ್ತು ವಿಶ್ವಾಸವನ್ನು ಸಮಾಜಮುಖಿ ಕೆಲಸಗಳ ಮೂಲಕ ಸಾಬೀತುಪಡಿಸೋಣ ಎಂದು ಕರೆ ನೀಡಿದರು.

ಗದಗ-ಬೆಟಗೇರಿ ನಗರಸಭೆ ಸದಸ್ಯರು ತಮ್ಮ ಬೆಂಬಲ ಸೂಚಿಸಿ ಸಲ್ಲಿಸಿರುವ ರಾಜೀನಾಮೆಯನ್ನು ಹಿಂಪಡೆಯುವಂತೆ ಮನವಿ ಮಾಡಿದ ಅವರು, ಜನಸೇವೆ ಮುಂದುವರಿಸುವುದೇ ನಿಜವಾದ ಬೆಂಬಲ ಎಂದು ಹೇಳಿದರು.ಈ ಸಂದರ್ಭದಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಅವರನ್ನು ಪಕ್ಷದ ವಿಧಾನಸಭಾ ಸಭಾಧ್ಯಕ್ಷರನ್ನಾಗಿ ಆಯ್ಕೆ ಮಾಡಿರುವುದಕ್ಕೆ ಅಭಿನಂದನೆ ಸಲ್ಲಿಸಿದರು. ಮಾಜಿ ಶಾಸಕ ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ ಮಾತನಾಡಿ, ಕಾರ್ಯಕರ್ತರು ಧೈರ್ಯ ಕಳೆದುಕೊಳ್ಳದೆ ಕಾಂಗ್ರೆಸ್ ತತ್ವ-ಸಿದ್ಧಾಂತಗಳ ಆಧಾರದ ಮೇಲೆ ಜನಸೇವೆಯಲ್ಲಿ ತೊಡಗಿ ಮಾದರಿ ನಾಯಕತ್ವವನ್ನು ಕಟ್ಟಬೇಕು ಎಂದು ಕರೆ ನೀಡಿದರು. ಸಭೆಯಲ್ಲಿ ವಾಸಣ್ಣ ಕುರಡಗಿ, ಸುರಪುರ, ಚನ್ನವೀರಪ್ಪ ಮಳಗಿ, ಸುಜಾತಾ ದೊಡ್ಡಮನಿ, ಬಸವರಾಜ ಕಡೇಮನಿ, ನೀಲಮ್ಮ ಬೋಳನವರ, ಸೈಯದ್ ಖಾಲೀದ್ ಕೊಪ್ಪಳ, ಭರಕತ್ ಅಲಿ ಮುಲ್ಲಾ, ಕೃಷ್ಣ ಪರಾಪೂರ, ಶ್ರೀನಿವಾಸ ಹುಯಿಲಗೋಳ ಸೇರಿದಂತೆ ಹಲವರು ಮಾತನಾಡಿದರು. ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮ ನಿರೂಪಿಸಿದರು. ಎಸ್.ಎನ್. ಬಳ್ಳಾರಿ ವಂದಿಸಿದರು.

> ಮಂತ್ರಿ ಸ್ಥಾನವೇ ಜನಸೇವೆಯ ಅಂತಿಮ ಗುರಿಯಲ್ಲ, ಸೇವೆಯ ಮೂಲಕವೇ ಗದಗವನ್ನು ರಾಜ್ಯಕ್ಕೆ ಮಾದರಿಯಾಗಿಸೋಣ.
> – ಎಚ್.ಕೆ. ಪಾಟೀಲ, ಶಾಸಕರು

---

### ಬರಪೀಡಿತ ಜಮೀನುಗಳಲ್ಲಿ ಬೆಳೆ ಹಾನಿ ಪರಿಶೀಲನೆ; ನೈಜ ವರದಿ ಆಧರಿಸಿ ಪರಿಹಾರಕ್ಕೆ ಸೂಚನೆ

## ರೈತರ ಅಹವಾಲು ಆಲಿಸಿದ ಸಚಿವ ರಾಯರಡ್ಡಿ



**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಗಾರು ಮಳೆಯ ಕೊರತೆಯಿಂದ ಜಿಲ್ಲೆಯಲ್ಲಿ ತೀವ್ರಗೊಂಡಿರುವ ಬರ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಅವರು ಶುಕ್ರವಾರ ಗದಗ ಹಾಗೂ ಮುಂಡರಗಿ ತಾಲೂಕಿನ ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆ ಹಾನಿಯನ್ನು ಪರಿಶೀಲಿಸಿದರು. ಬೆಳೆ ನಷ್ಟದ ನೈಜ ಚಿತ್ರಣ ದಾಖಲಿಸಿ, ಯಾವುದೇ ಅರ್ಹ ರೈತ ಸರ್ಕಾರದ ಪರಿಹಾರದಿಂದ ವಂಚಿತರಾಗದಂತೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮೊದಲು ಗದಗ ತಾಲೂಕಿನ ಗಂಗಿಮಡಿ ಬಳಿಯ ಜಮೀನಿಗೆ ಭೇಟಿ ನೀಡಿದ ಸಚಿವರು, ಶೇಂಗಾ, ಹೆಸರು ಹಾಗೂ ಮೆಣಸಿನಕಾಯಿ ಬೆಳೆಗಳ ಸ್ಥಿತಿಯನ್ನು ಪರಿಶೀಲಿಸಿದರು. ಮಳೆಯ ಕೊರತೆಯಿಂದ ಬೆಳೆಗಳ ಬೆಳವಣಿಗೆ ಕುಂಠಿತಗೊಂಡಿರುವುದು, ತೇವಾಂಶದ ಅಭಾವದಿಂದ ಬೆಳೆಗಳು ಒಣಗುತ್ತಿರುವ ಬಗ್ಗೆ ಕೃಷಿ ಇಲಾಖೆ ಅಧಿಕಾರಿಗಳಿಂದ ಮಾಹಿತಿ ಪಡೆದರು.

ನಂತರ ಮುಂಡರಗಿ ತಾಲೂಕಿನ ಮೇವುಂಡಿ ಗ್ರಾಮದ ಜಮೀನಿಗೆ ಭೇಟಿ ನೀಡಿ ಮೆಣಸಿನಕಾಯಿ ಹಾಗೂ ಈರುಳ್ಳಿ ಬೆಳೆಗಳ ಸ್ಥಿತಿಗತಿಯನ್ನು ಪರಿಶೀಲಿಸಿದರು. ಮಳೆ ಅಭಾವದಿಂದ ಬೆಳೆಗಳು ಬಾಡುತ್ತಿರುವುದು ಹಾಗೂ ಇದೇ ಪರಿಸ್ಥಿತಿ ಮುಂದುವರಿದರೆ ಹೆಚ್ಚಿನ ನಷ್ಟ ಸಂಭವಿಸುವ ಸಾಧ್ಯತೆ ಕುರಿತು ಅಧಿಕಾರಿಗಳು ಸಚಿವರಿಗೆ ವಿವರಿಸಿದರು.

ಪರಿಶೀಲನೆ ವೇಳೆ ರೈತರೊಂದಿಗೆ ನೇರವಾಗಿ ಸಂವಾದ ನಡೆಸಿದ ಸಚಿವರು, ಬಿತ್ತನೆ ವೆಚ್ಚ, ನೀರಿನ ಕೊರತೆ, ಬೆಳೆ ಹಾನಿ ಹಾಗೂ ಎದುರಾಗಿರುವ ಸಂಕಷ್ಟಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

> ಬೆಳೆ ಹಾನಿಯ ನೈಜ ವರದಿ ಸಿದ್ಧಪಡಿಸಿ, ಸರ್ಕಾರದ ಪರಿಹಾರ ಪ್ರತಿಯೊಬ್ಬ ಅರ್ಹ ರೈತನಿಗೂ ತಲುಪಬೇಕು. ರೈತರ ಸಂಕಷ್ಟಕ್ಕೆ ಸರ್ಕಾರ ಸ್ಪಂದಿಸಲಿದೆ.
> – ಬಸವರಾಜ ರಾಯರಡ್ಡಿ, ಜಿಲ್ಲಾ ಉಸ್ತುವಾರಿ ಸಚಿವ

ಬೆಳೆ ಹಾನಿ ಮೌಲ್ಯಮಾಪನವನ್ನು ಪಾರದರ್ಶಕವಾಗಿ ನಡೆಸಿ ಸರ್ಕಾರದ ಮಾರ್ಗಸೂಚಿಯಂತೆ ಪರಿಹಾರ ಕಲ್ಪಿಸಲು ಕ್ರಮ ಕೈಗೊಳ್ಳಬೇಕು. ರೈತರ ಜಮೀನುಗಳಿಗೆ ತೆರಳಿ ನೈಜ ವರದಿ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಬೇಕು. ಯಾವುದೇ ಅರ್ಹ ರೈತರಿಗೆ ಅನ್ಯಾಯವಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸಚಿವರು ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರೈತರು ಆತಂಕ ಪಡುವ ಅಗತ್ಯವಿಲ್ಲ. ಸರ್ಕಾರ ರೈತರ ಸಂಕಷ್ಟಕ್ಕೆ ಸ್ಪಂದಿಸಲಿದೆ. ಜಿಲ್ಲೆಯ ಬೆಳೆ ಹಾನಿಯ ಸಂಪೂರ್ಣ ವರದಿಯನ್ನು ರಾಜ್ಯ ಸರ್ಕಾರದ ಗಮನಕ್ಕೆ ತಂದು, ಅಗತ್ಯ ನೆರವು ಮತ್ತು ಪರಿಹಾರ ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು.

ಪರಿಶೀಲನೆ ಸಂದರ್ಭದಲ್ಲಿ ಶಾಸಕರಾದ ಎಚ್.ಕೆ. ಪಾಟೀಲ, ಡಾ. ಚಂದ್ರು ಲಮಾಣಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು ಮತ್ತು ರೈತರು ಉಪಸ್ಥಿತರಿದ್ದರು.

---

### ವಿದ್ಯಾರ್ಥಿಗಳ ಗೋಳು ಕೇಳಿದ ಉಪಲೋಕಾಯುಕ್ತರು; ನಿರ್ಲಕ್ಷ್ಯಕ್ಕೆ ಅಧಿಕಾರಿಗಳ ವಿರುದ್ಧ ಕ್ರಮದ ಎಚ್ಚರಿಕೆ

## ಇದು ವಸತಿ ನಿಲಯವೋ, ಅವ್ಯವಸ್ಥೆಯ ಅಡ್ಡೆಯೋ?

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸೂರ್ಯನಗರದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೆ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಶುಕ್ರವಾರ ಅನಿರೀಕ್ಷಿತವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿ, ವಸತಿ ನಿಲಯದ ಅವ್ಯವಸ್ಥೆ ಕಂಡು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಮೊದಲು ಆಹಾರ ದಾಸ್ತಾನು ಕೊಠಡಿ, ಅಡುಗೆ ವ್ಯವಸ್ಥೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಪರಿಶೀಲಿಸಿದ ಅವರು, ಅಲ್ಲಿನ ಸ್ಥಿತಿಗತಿಗಳ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದರು. ಬಳಿಕ ವಿದ್ಯಾರ್ಥಿಗಳ ಕೊಠಡಿಗಳು, ಶೌಚಾಲಯ, ನೀರಿನ ಟ್ಯಾಂಕ್ ಹಾಗೂ ವಸತಿ ನಿಲಯದ ಆವರಣವನ್ನು ವೀಕ್ಷಿಸಿದ ಅವರು, ನಿರ್ವಹಣೆ ತೀರಾ ಕಳಪೆಯಾಗಿರುವುದನ್ನು ಕಂಡು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಸಂಬಂಧಿಸಿದ ಅಧಿಕಾರಿಗಳು ನಿಯಮಿತವಾಗಿ ವಸತಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸದಿರುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ. ಕೂಡಲೇ ವಸತಿ ನಿಲಯದ ಸ್ವಚ್ಛತೆ, ಕೊಠಡಿಗಳ ದುರಸ್ತಿ ಹಾಗೂ ಮೂಲಸೌಕರ್ಯ ಸುಧಾರಣೆ ಕೈಗೊಂಡು ವರದಿ ಸಲ್ಲಿಸುವಂತೆ ಖಡಕ್ ಸೂಚನೆ ನೀಡಿದರು.

ವಸತಿ ನಿಲಯದಲ್ಲಿ ಬಳಸುತ್ತಿರುವ ನೀರು ಕುಡಿಯಲು ಮತ್ತು ಬಳಕೆಗೆ ಯೋಗ್ಯವಾಗಿದೆಯೇ ಎಂಬುದನ್ನು ಪರೀಕ್ಷಿಸಿ ತಕ್ಷಣ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



> ವಿದ್ಯಾರ್ಥಿಗಳ ವಸತಿ ನಿಲಯಗಳನ್ನು ನಿರ್ಲಕ್ಷಿಸುವುದನ್ನು ಸಹಿಸಲಾಗುವುದಿಲ್ಲ. ಸ್ವಚ್ಛತೆ, ಸುರಕ್ಷತೆ ಮತ್ತು ಮೂಲಸೌಕರ್ಯಗಳನ್ನು ಕೂಡಲೇ ಸರಿಪಡಿಸಿ ವರದಿ ಸಲ್ಲಿಸಿ.
> – ಕೆ.ಎನ್. ಫಣೀಂದ್ರ, ಉಪಲೋಕಾಯುಕ್ತ ನ್ಯಾಯಮೂರ್ತಿ


ಇದೇ ವೇಳೆ ವಸತಿ ನಿಲಯದಲ್ಲಿದ್ದ ಗಣಕಯಂತ್ರಗಳು, ಹಾಸಿಗೆಗಳು ಸೇರಿದಂತೆ ಇತರೆ ಸಾಮಗ್ರಿಗಳನ್ನು ಬೇರೆ ವಸತಿ ನಿಲಯಕ್ಕೆ ಸ್ಥಳಾಂತರಿಸಿರುವ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಬಳಿಕ ವಿದ್ಯಾರ್ಥಿಗಳೊಂದಿಗೆ ನೇರವಾಗಿ ಸಂವಾದ ನಡೆಸಿದ ಉಪಲೋಕಾಯುಕ್ತರು, ವಸತಿ ನಿಲಯದ ಸಮಸ್ಯೆಗಳ ಕುರಿತು ಮಾಹಿತಿ ಪಡೆದರು. ಈ ವೇಳೆ ವಿದ್ಯಾರ್ಥಿಗಳು ಮೇಲ್ವಿಚಾರಕರ ನಿರ್ಲಕ್ಷ್ಯ, ಗುಣಮಟ್ಟದ ಆಹಾರದ ಕೊರತೆ, ಶುದ್ಧ ಕುಡಿಯುವ ನೀರಿನ ಸಮಸ್ಯೆ, ಕಂಪ್ಯೂಟರ್ ಸ್ಥಳಾಂತರ, ಗ್ರಂಥಾಲಯದ ಕೊರತೆ, ಶೌಚಾಲಯಗಳ ದುಸ್ಥಿತಿ ಹಾಗೂ ವಸತಿ ನಿಲಯದ ಅಸ್ವಚ್ಛತೆ ಕುರಿತು ದೂರು ಸಲ್ಲಿಸಿದರು. ಈ ಸಂದರ್ಭದಲ್ಲಿ ಹಿರಿಯ ನ್ಯಾಯಾಧೀಶರು ಹಾಗೂ ಆಪ್ತ ಕಾರ್ಯದರ್ಶಿ ಕಿರಣ್ ಪಿ.ಎಂ. ಪಾಟೀಲ್, ಸುನೀಲಕುಮಾರ್ ಆರ್., ಅಪರ ಜಿಲ್ಲಾ ಧಿಕಾರಿ ಡಾ. ದುರಗೇಶ್ ಕೆ.ಆರ್., ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಹಾಗೂ ವಸತಿ ನಿಲಯದ ಮೇಲ್ವಿಚಾರಕರು ಉಪಸ್ಥಿತರಿದ್ದರು.

---

### ಆರ್‌ಟಿಒ ಕಚೇರಿಗೆ ಉಪಲೋಕಾಯುಕ್ತರ ದಿಢೀರ್ ಭೇಟಿ; ಸಿಬ್ಬಂದಿಗೆ ಖಡಕ್ ಎಚ್ಚರಿಕೆ

## ಆನ್‌ಲೈನ್ ಸೇವೆಯಲ್ಲೂ ಮಧ್ಯವರ್ತಿಗಳ ಹಾವಳಿ?



**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಾದೇಶಿಕ ಸಾರಿಗೆ ಅಧಿಕಾರಿಗಳ (ಆರ್‌ಟಿಒ) ಕಚೇರಿಗೆ ಶುಕ್ರವಾರ ದಿಢೀರ್ ಭೇಟಿ ನೀಡಿದ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ, ಕಚೇರಿ ನಿರ್ವಹಣೆ, ದಾಖಲೆಗಳ ನಿರ್ವಹಣೆ ಹಾಗೂ ಸಾರ್ವಜನಿಕ ಸೇವೆಯ ಕುರಿತು ಸಮಗ್ರ ಪರಿಶೀಲನೆ ನಡೆಸಿ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.

ಕಚೇರಿಯ ವಿವಿಧ ರಿಜಿಸ್ಟರ್‌ಗಳನ್ನು ಪರಿಶೀಲಿಸಿದ ಅವರು, ಜಪ್ತಿ ಮಾಡಿದ ವಾಹನಗಳು, ಶಾಲಾ ವಾಹನಗಳು ಹಾಗೂ ತೆರಿಗೆ ಬಾಕಿ ಇರುವ ವಾಹನಗಳ ವಿವರಗಳನ್ನು ಪರಿಶೀಲಿಸಿ ಕಾನೂನುಬದ್ಧ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಅಗತ್ಯ ದಾಖಲೆಗಳಿಲ್ಲದೆ ಹಾಗೂ ತೆರಿಗೆ ಪಾವತಿಸದೆ ಸಂಚರಿಸುವ ಶಾಲಾ ವಾಹನಗಳ ವಿರುದ್ಧ ವಿಶೇಷ ಕಾರ್ಯಾಚರಣೆ ನಡೆಸುವಂತೆ ನಿರ್ದೇಶನ ನೀಡಿದರು. ಬಳಿಕ ಸಿಬ್ಬಂದಿಯ ಹಾಜರಾತಿ, ನಗದು ವಹಿ ಹಾಗೂ ಚಲನ-ವಲನ ವಹಿಗಳನ್ನು ಪರಿಶೀಲಿಸಿದ ಅವರು, ವಹಿಗಳನ್ನು ಸಮರ್ಪಕವಾಗಿ ನಿರ್ವಹಿಸದ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು.

ಯಮಿತವಾಗಿ ದಾಖಲೆಗಳನ್ನು ನಮೂದಿಸದ ಸಿಬ್ಬಂದಿಗೆ ನೋಟಿಸ್ ಜಾರಿ ಮಾಡುವಂತೆ ಸೂಚಿಸಿದ ಅವರು, ಎಲ್ಲ ಸಿಬ್ಬಂದಿಯ ಮೊಬೈಲ್‌ಗಳನ್ನು ಪರಿಶೀಲಿಸುವಂತೆ ಆದೇಶಿಸಿದರು.

ಪ್ರತಿ ಸಿಬ್ಬಂದಿಯೂ ಪ್ರತಿದಿನ ಕಡ್ಡಾಯವಾಗಿ ಹಾಜರಾತಿ, ನಗದು ವಹಿ ಹಾಗೂ ಚಲನ-ವಲನ ವಹಿಗಳನ್ನು ಸರಿಯಾಗಿ ನಿರ್ವಹಿಸಬೇಕು. ಅಧಿಕಾರಿಗಳು ಸಹ ಈ ದಾಖಲೆಗಳನ್ನು ನಿಯಮಿತವಾಗಿ ಪರಿಶೀಲಿಸಬೇಕು ಎಂದು ತಿಳಿಸಿದರು.ಆನ್‌ಲೈನ್ ಸೇವೆಗಳಿದ್ದರೂ ಮಧ್ಯವರ್ತಿಗಳು ಸಾರ್ವಜನಿಕರಿಂದ ಹಣ ವಸೂಲಿ ಮಾಡುತ್ತಿರುವ ಕುರಿತು ದೂರುಗಳು ಬಂದಿವೆ. ಇಂತಹ ಅಕ್ರಮಗಳು ಮರುಕಳಿಸಿದರೆ ಸಂಬಂಧಪಟ್ಟವರ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸು ಮಾಡಲಾಗುವುದು ಎಂದು ಉಪಲೋಕಾಯುಕ್ತರು ಖಡಕ್ ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಹಿರಿಯ ನ್ಯಾಯಾಧೀಶರು ಹಾಗೂ ಆಪ್ತ ಕಾರ್ಯದರ್ಶಿ ಕಿರಣ್ ಪಿ.ಎಂ. ಪಾಟೀಲ್, ಸುನೀಲಕುಮಾರ್ ಆರ್., ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಪ್ರಾದೇಶಿಕ ಸಾರಿಗೆ ಅಧಿಕಾರಿ ವಿಶಾಲ ಜಿ.ಪಿ. ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

> ಸರ್ಕಾರಿ ಸೇವೆಗಳು ಪಾರದರ್ಶಕವಾಗಿ ಜನರಿಗೆ ತಲುಪಬೇಕು. ಆನ್‌ಲೈನ್ ವ್ಯವಸ್ಥೆಯಲ್ಲೂ ಮಧ್ಯವರ್ತಿಗಳ ಹಾವಳಿ ಕಂಡುಬಂದರೆ ಕಠಿಣ ಶಿಸ್ತು ಕ್ರಮ ಅನಿವಾರ್ಯ.
> – ಕೆ.ಎನ್. ಫಣೀಂದ್ರ, ಉಪಲೋಕಾಯುಕ್ತ ನ್ಯಾಯಮೂರ್ತಿ

---

## ಎಸ್‌ಪಿ ಕಚೇರಿಗೆ ಉಪಲೋಕಾಯುಕ್ತರ ಭೇಟಿ

**ವಿಜಯಸಾಕ್ಷಿ ಸುದ್ದಿ, ಗದಗ**

ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ, ಅವರು ಶುಕ್ರವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ (ಎಸ್‌ಪಿ) ಕಚೇರಿಗೆ ಭೇಟಿ ನೀಡಿ ವಿವಿಧ ಯೋಜನೆಗಳ ಅನುಷ್ಠಾನ ಹಾಗೂ ಕಾರ್ಯವೈಖರಿಯನ್ನು ಪರಿಶೀಲಿಸಿದರು.

ಈ ವೇಳೆ ಎಸ್‌ಪಿ ಕಚೇರಿಯಲ್ಲಿ ಜಾರಿಯಲ್ಲಿರುವ ಟಿಪ್ರಭುವಿನೆಡೆಗೆ ಪ್ರಭುತ್ವಟಿ ಹಾಗೂ ಟಿಥರ್ಡ್ ಐಟಿ ಯೋಜನೆಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಈ ಯೋಜನೆಗಳ ಬಗ್ಗೆ ಸಾರ್ವಜನಿಕರಲ್ಲಿ ಇನ್ನಷ್ಟು ಅರಿವು ಮೂಡಿಸುವ ಕೆಲಸಕ್ಕೆ ಆದ್ಯತೆ ನೀಡುವಂತೆ ಸೂಚಿಸಿದರು.

ಜನಸ್ನೇಹಿ ಪೊಲೀಸ್ ಸೇವೆಗಳು ಹಾಗೂ ತಂತ್ರಜ್ಞಾನ ಆಧಾರಿತ ಯೋಜನೆಗಳ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳುವಂತೆ ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಸಲಹೆ ನೀಡಿದರು. ಪರಿಶೀಲನೆ ಸಂದರ್ಭದಲ್ಲಿ ಹಿರಿಯ ನ್ಯಾಯಾಧೀಶರು ಹಾಗೂ ಆಪ್ತ ಕಾರ್ಯದರ್ಶಿ ಕಿರಣ್ ಪಿ.ಎಂ. ಪಾಟೀಲ, ಸುನೀಲಕುಮಾರ್ ಆರ್., ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಹಾಗೂ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಉಪಸ್ಥಿತರಿದ್ದರು.





# ಬೆಳೆ ಹಾನಿ ಅವಲೋಕಿಸಿದ ಸಚಿವ ರಾಯರಡ್ಡಿ- ಎಚ್.ಕೆ.ಪಾಟೀಲ

**ವಿಜಯಸಾಕ್ಷಿ ಸುದ್ದಿ, ಗದಗ**

ಗಂಗಿಮಡಿ ಸಮೀಪದ ಜಮೀನುಗಳಿಗೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಅವರು ಬರದಿಂದ ಹಾನಿಗೊಳಗಾದ ಹೆಸರು ಹಾಗೂ ಶೇಂಗಾ ಬೆಳೆಗಳನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಗದಗ ಶಾಸಕ ಎಚ್.ಕೆ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹಾಗೂ ಜಿಲ್ಲಾಡಳಿತದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



















### ಸಂಕ್ಷಿಪ್ತ ಸುದ್ದಿಗಳು

## ಅನಾಥ ಮಕ್ಕಳಿಗೆ ಆಸರೆಯಾದ ಲಯನ್ಸ್ ಕ್ಲಬ್

**ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜಮುಖಿ ಸೇವೆಗೆ ಹೆಸರಾದ ಗದಗ-ಬೆಟಗೇರಿ ಲಯನ್ಸ್ ಕ್ಲಬ್, ಲಕ್ಷ್ಮೇಶ್ವರ ಸಮೀಪದ ಹೂವಿನಶಿಗ್ಲಿಯ ವಿರಕ್ತಮಠದ ಗುರುಕುಲ ಶಿಕ್ಷಣ ಸಂಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅನಾಥಾಶ್ರಮಕ್ಕೆ ಆಹಾರ ಸಾಮಗ್ರಿ, ದೇಣಿಗೆ ನೀಡಿ, ಏಳು ಬಡ ವಿದ್ಯಾರ್ಥಿಗಳ ಒಂದು ವರ್ಷದ ಶಿಕ್ಷಣದ ವೆಚ್ಚವನ್ನು ಭರಿಸುವ ಮೂಲಕ ಮಾನವೀಯತೆ ಮೆರೆದಿದೆ.

ಡಾ. ಸತೀಶ ಹೊಂಬಾಳಿ ಅವರ ಮಾರ್ಗದರ್ಶನದಲ್ಲಿ ಆಶ್ರಮಕ್ಕೆ ಭೇಟಿ ನೀಡಿದ ಲಯನ್ಸ್ ಕ್ಲಬ್ ಸದಸ್ಯರು, ಸುಮಾರು 300 ಅನಾಥ ಮಕ್ಕಳು ಆಶ್ರಯ ಪಡೆದಿರುವ ಆಶ್ರಮಕ್ಕೆ ಅಕ್ಕಿ, ಬೆಲ್ಲ ಸೇರಿದಂತೆ ಅಗತ್ಯ ಆಹಾರ ಸಾಮಗ್ರಿ, ನೋಟ್‌ಬುಕ್ ಹಾಗೂ ಪೆನ್ನುಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ, ಸಂತೋಷ ಕಬಾಡರ, ಡಾ. ಅರುಣಕುಮಾರ ಕರಿಗಾರ, ಡಾ. ಸತೀಶ ಹೊಂಬಾಳಿ, ಶರಣು ಗದಗ ಹಾಗೂ ಕಿಶನ್ ಮೇರವಾಡೆ ಅವರು ತಲಾ ₹11 ಸಾವಿರ ದೇಣಿಗೆ ನೀಡಿ, ಒಟ್ಟು ಏಳು ವಿದ್ಯಾರ್ಥಿಗಳ ಒಂದು ವರ್ಷದ ಶಿಕ್ಷಣದ ವೆಚ್ಚವನ್ನು ದತ್ತು ಸ್ವೀಕರಿಸಿದರು.

ದಾನಿಗಳನ್ನು ಅಭಿನಂದಿಸಿದ ಹೂವಿನಶಿಗ್ಲಿ ವಿರಕ್ತಮಠದ ಪೀಠಾಧಿಪತಿ ಪೂಜ್ಯ ಚನ್ನವೀರ ಮಹಾಸ್ವಾಮಿಗಳು, 1996ರಿಂದ ಆಶ್ರಮವು ಯಾವುದೇ ಸರ್ಕಾರಿ ಅನುದಾನವಿಲ್ಲದೆ ದಾನಿಗಳ ಸಹಕಾರದಿಂದ ಅನಾಥ ಮಕ್ಕಳಿಗೆ ಉಚಿತ ಶಿಕ್ಷಣ, ವಸತಿ ಮತ್ತು ಅನ್ನದಾಸೋಹ ನೀಡುತ್ತಿದ್ದು, ಲಯನ್ಸ್ ಕ್ಲಬ್‌ನ ಈ ನೆರವು ಮಕ್ಕಳ ಭವಿಷ್ಯಕ್ಕೆ ಮತ್ತಷ್ಟು ಬಲ ತುಂಬಲಿದೆ ಎಂದು ಹೇಳಿದರು.

### ಶಿರಹಟ್ಟಿ ಜನರ ಬಹುದಿನಗಳ ಕನಸು ನನಸಿನತ್ತ; ಶೀಘ್ರದಲ್ಲೇ ಅತ್ಯಾಧುನಿಕ ಆರೋಗ್ಯ ಸೇವೆ ಲಭ್ಯ

## ₹32.97 ಕೋಟಿ ವೆಚ್ಚದ 100 ಹಾಸಿಗೆ ಆಸ್ಪತ್ರೆ ಉದ್ಘಾಟನೆಗೆ ಸಜ್ಜು




**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದ ಜನತೆಯ ಬಹುದಿನಗಳ ಕನಸಾಗಿದ್ದ 100 ಹಾಸಿಗೆಗಳ ತಾಲೂಕು ಆಸ್ಪತ್ರೆ ನಿರ್ಮಾಣ ಕಾಮಗಾರಿ ಅಂತಿಮ ಹಂತ ತಲುಪಿದ್ದು, ಶೀಘ್ರದಲ್ಲೇ ಉದ್ಘಾಟನೆಗೆ ಸಜ್ಜಾಗಿದೆ. 2024-25ನೇ ಸಾಲಿನ ನಬಾರ್ಡ್ (ಐಈಊ) ಯೋಜನೆಯಡಿ ₹32.97 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಈ ಆಸ್ಪತ್ರೆ ತಾಲೂಕಿನ ಆರೋಗ್ಯ ಸೇವೆಗೆ ಹೊಸ ಆಯಾಮ ನೀಡಲಿದೆ.

ಈ ಆಸ್ಪತ್ರೆಯಲ್ಲಿ 11 ಮಂದಿ ತಜ್ಞ ವೈದ್ಯರ ಹುದ್ದೆಗಳು, ತುರ್ತು ಚಿಕಿತ್ಸಾ ವಿಭಾಗಕ್ಕೆ ಪ್ರತ್ಯೇಕ ವೈದ್ಯರು, ಮಾಡ್ಯುಲರ್ ಆಪರೇಷನ್ ಥಿಯೇಟರ್, ಸೆಪ್ಟಿಕ್ ಹಾಗೂ ಮೈನರ್ ಓಟಿ, ಡಯಾಲಿಸಿಸ್ ಘಟಕ, ಎಕ್ಸ್-ರೇ, ಪ್ರತಿ ವಿಭಾಗಕ್ಕೂ ಓಪಿಡಿ, ಎನ್‌ಸಿಡಿ ಘಟಕ, ಕಣ್ಣಿನ ಸಲಹಾ ಕೇಂದ್ರ, ಎಚ್‌ಐವಿ ಹಾಗೂ ಕ್ಷಯರೋಗ ಘಟಕ ಸೇರಿದಂತೆ ಅತ್ಯಾಧುನಿಕ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ವೈದ್ಯರು ಮತ್ತು ಸಿಬ್ಬಂದಿಗೆ ಪ್ರತ್ಯೇಕ ವಸತಿ ವ್ಯವಸ್ಥೆಯೂ ಇರಲಿದೆ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಎಸ್.ಎಸ್. ನೀಲಗುಂದ ಪ್ರತಿಕ್ರಿಯಿಸಿ, ಆಸ್ಪತ್ರೆ ಕಟ್ಟಡದ ಕಾಮಗಾರಿ ಅಂತಿಮ ಹಂತದಲ್ಲಿದ್ದು, ಶೀಘ್ರದಲ್ಲೇ ಉದ್ಘಾಟನೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ವೈದ್ಯನಾಗಿ ಸೇವೆ ಸಲ್ಲಿಸುತ್ತಿದ್ದಾಗಲೇ ಆಸ್ಪತ್ರೆಗೆ ಜಾಗೆ ಗುರುತಿಸುವ ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದೆ. ಶಾಸಕನಾದ ಬಳಿಕ ಅನುದಾನ ತಂದು ಕಾಮಗಾರಿಯನ್ನು ಪೂರ್ಣಗೊಳಿಸುವ ಅವಕಾಶ ದೊರೆತಿರುವುದು ನನ್ನ ಸಾರ್ವಜನಿಕ ಜೀವನದ ಸೌಭಾಗ್ಯವಾಗಿದೆ ಎಂದು ಹೇಳಿದರು.

ಡಿ.ಕೆ. ಶಿವಕುಮಾರ್ ಅಭಿಮಾನಿ ಬಳಗದ ಜಿಲ್ಲಾ ಕಾರ್ಯಾಧ್ಯಕ್ಷ ಮಹಾಂತೇಶ ದಶಮನಿ ಮಾತನಾಡಿ, ಶಿರಹಟ್ಟಿ ತಾಲೂಕಿನ ಜನರ ಬಹುದಿನಗಳ ಕನಸು ನನಸಾಗುತ್ತಿದ್ದು, ಆಸ್ಪತ್ರೆಯಲ್ಲಿ ಎಲ್ಲ ಹಂತದ ಆರೋಗ್ಯ ಸೇವೆಗಳು ನಿರಂತರವಾಗಿ ಲಭ್ಯವಾಗುವಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

## ಆ. 9ರಂದು ಚಿಕ್ಕಟ್ಟಿ ಗುರುಗಳ ಶಿವರಾಯ ಅಭಿನಂದನಾ ಗ್ರಂಥ ಬಿಡುಗಡೆ




**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮೀಣ ಹಿನ್ನೆಲೆಯಿಂದ ಬಂದು ಗದಗದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ವಿಶಿಷ್ಟ ಕೊಡುಗೆ ನೀಡಿರುವ ಶಿಕ್ಷಣ ತಜ್ಞ ಪ್ರೊ. ಎಸ್.ವೈ. ಚಿಕ್ಕಟ್ಟಿ ಅವರ ಜೀವನ ಸಾಧನೆಯನ್ನು ದಾಖಲಿಸುವ 'ಶಿವರಾಯ' ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭವು ಆಗಸ್ಟ್ 9ರಂದು ನಗರದ ಮುಂಡರಗಿ ರಸ್ತೆಯ ಚಿಕ್ಕಟ್ಟಿ ಶಿಕ್ಷಣ ಸಂಸ್ಥೆಯ ಸಭಾಭವನದಲ್ಲಿ ನಡೆಯಲಿದೆ.

ಈ ಕುರಿತು ಗುರುವಾರ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಸಾಹಿತಿ ಐ.ಕೆ. ಕಮ್ಮಾರ, ಸಮಾರಂಭದ ಅಧ್ಯಕ್ಷತೆಯನ್ನು ಮಾಜಿ ಶಾಸಕ ಡಿ.ಆರ್. ಪಾಟೀಲ ವಹಿಸಲಿದ್ದು, ಶಾಸಕ ಎಚ್.ಕೆ. ಪಾಟೀಲ ಉದ್ಘಾಟಿಸಲಿದ್ದಾರೆ. ಬಿಜ್ಜರಗಿಯ ಸೋಮಲಿಂಗ ಪಾಟೀಲ ಅವರು ಅಭಿನಂದನಾ ಗ್ರಂಥವನ್ನು ಬಿಡುಗಡೆ ಮಾಡಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಪತ್ರಕರ್ತ ರವಿ ಎಸ್., ಸಂತಸಾಯಿ ಶಿಕ್ಷಣ ಸಂಸ್ಥೆ (ಪುಣೆ) ಸಂಸ್ಥಾಪಕ ಎಸ್.ಎನ್. ಢವಳೇಶ್ವರ, ವಿದ್ಯಾದಾನ ಸಮಿತಿಯ ಅಧ್ಯಕ್ಷ ಶ್ರೀನಿವಾಸ್ ಹುಯಿಲಗೋಳ, ವಿಶ್ರಾಂತ ಪ್ರಾಚಾರ್ಯ ಕೆ. ಎಚ್. ಬೇಲೂರು, ಅಡಹಳಟ್ಟಿಯ ಪಿಕೆಪಿಎಸ್ ಅಧ್ಯಕ್ಷ ಘಟಿವಾಳಪ್ಪ ಗುಡ್ಡಾಪುರ, ಅಥಣಿಯ ಬಸವರಾಜ ಉಮ್ರಾಣಿ ಸೇರಿದಂತೆ ಶಿಕ್ಷಣ ಕ್ಷೇತ್ರದ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.

ಪ್ರೊ. ಎಸ್.ವೈ. ಚಿಕ್ಕಟ್ಟಿ ಅವರು ತಮ್ಮ ಪರಿಶ್ರಮದಿಂದ ಶಿಕ್ಷಣ ಸಂಸ್ಥೆಗಳನ್ನು ಬೆಳೆಸಿ ಈ ಭಾಗದ ಶಿಕ್ಷಣ ಕ್ಷೇತ್ರವನ್ನು ಶ್ರೀಮಂತಗೊಳಿಸಿದ್ದಾರೆ. ಅವರ ಶೈಕ್ಷಣಿಕ ಸಾಧನೆ, ಸೇವೆ ಹಾಗೂ ಸಮಾಜಮುಖಿ ಕಾರ್ಯಗಳನ್ನು ದಾಖಲಿಸಿ ಮುಂದಿನ ಪೀಳಿಗೆಗೆ ತಲುಪಿಸುವ ಉದ್ದೇಶದಿಂದ ಅವರ ಶಿಷ್ಯರು ಮತ್ತು ಅಭಿಮಾನಿಗಳು 'ಶಿವರಾಯ' ಅಭಿನಂದನಾ ಗ್ರಂಥವನ್ನು ಪ್ರಕಟಿಸಿದ್ದಾರೆ ಎಂದು ಐ.ಕೆ. ಕಮ್ಮಾರ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಪ್ರೊ. ಶ್ರೀಶೈಲ ಬಡಿಗೇರ, ಕೆ.ಎಚ್. ಬೇಲೂರು, ಎಸ್.ಎಲ್. ಹುಯಿಲಗೋಳ, ವಿ.ಎಂ. ಮುಂದಿನಮನಿ, ಶೋಭಾ ಭಟ್, ಶೋಭಾ ಸ್ಥಾವರಮಠ, ರಿಯಾನಾ ಮುಲ್ಲಾ ಹಾಗೂ ಪುಷ್ಪಲತಾ ಬೆಲೇರಿ ಉಪಸ್ಥಿತರಿದ್ದರು.

### ಆರೋಪಿತರಿಗೆ ಸಚಿವ ಸ್ಥಾನ ನೀಡಿದ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಜಿಲ್ಲಾ ಅಧ್ಯಕ್ಷ ರಾಜು ಕುರುಡಗಿ ವಾಗ್ದಾಳಿ

## ಸಚಿವ ಸಂಪುಟವೋ... ಭ್ರಷ್ಟರ ಸಂಪುಟವೋ?

**ವಿಜಯಸಾಕ್ಷಿ ಸುದ್ದಿ, ಗದಗ**



ಕರ್ನಾಟಕ ಸರ್ಕಾರದ ನೂತನ ಸಚಿವ ಸಂಪುಟದಲ್ಲಿ ಭ್ರಷ್ಟಾಚಾರದ ಆರೋಪ ಎದುರಿಸುತ್ತಿರುವವರಿಗೆ ಸಚಿವ ಸ್ಥಾನ ನೀಡಿರುವುದನ್ನು ಖಂಡಿಸಿರುವ ಬಿಜೆಪಿ ಗದಗ ಜಿಲ್ಲಾ ಘಟಕದ ಅಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಇದು ಸಚಿವ ಸಂಪುಟವಲ್ಲ, ಭ್ರಷ್ಟರ ಸಂಪುಟ ಎಂದು ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಗುರುವಾರ ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿದ ಅವರು, ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರುಪಯೋಗ ಪ್ರಕರಣದಲ್ಲಿ ಆರೋಪ ಎದುರಿಸಿದ್ದ ಬಳ್ಳಾರಿ ಗ್ರಾಮಾಂತರ ಶಾಸಕ ಬಿ. ನಾಗೇಂದ್ರ ಅವರಿಗೆ ಮತ್ತೆ ಸಚಿವ ಸ್ಥಾನ ನೀಡಿರುವುದು ದುರದೃಷ್ಟಕರ ಬೆಳವಣಿಗೆ ಎಂದು ಆರೋಪಿಸಿದರು.

ಭ್ರಷ್ಟಾಚಾರ, ತನಿಖೆ ಹಾಗೂ ನ್ಯಾಯಾಂಗ ಪ್ರಕ್ರಿಯೆಗಳಿಗೆ ಸಂಬಂಧಿಸಿದ ಆರೋಪಗಳಿರುವ ವ್ಯಕ್ತಿಗಳಿಗೆ ಸಚಿವ ಸ್ಥಾನ ನೀಡಿರುವುದು ಉತ್ತಮ ಆಡಳಿತ ಹಾಗೂ ಸಾರ್ವಜನಿಕ ಜೀವನದ ನೈತಿಕ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಅವರು ಟೀಕಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಸುಮಾರು ₹187 ಕೋಟಿ ಹಣ ದುರುಪಯೋಗ ಪ್ರಕರಣ ಗಂಭೀರವಾಗಿದ್ದು, ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಮೀಸಲಾದ ಸಾರ್ವಜನಿಕ ಹಣ ದುರ್ಬಳಕೆಯಾಗಿರುವ ಆರೋಪದ ಕುರಿತು ಸರ್ಕಾರ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ಸಚಿವ ಸ್ಥಾನಗಳು ಯಾವುದೇ ಅನುಮಾನ ಅಥವಾ ವಿವಾದಗಳಿಗೆ ಎಡೆಮಾಡಿಕೊಡುವಂತಿರಬಾರದು. ಭ್ರಷ್ಟಾಚಾರವು ಕೇವಲ ಹಣದ ದುರುಪಯೋಗವಲ್ಲ, ಬಡವರು, ರೈತರು, ಮಹಿಳೆಯರು, ವಿದ್ಯಾರ್ಥಿಗಳು, ಯುವಕರು ಹಾಗೂ ಪರಿಶಿಷ್ಟ ಜಾತಿ-ಪಂಗಡದ ಜನರ ಹಕ್ಕುಗಳಿಗೆ ಆಗುವ ಅನ್ಯಾಯವಾಗಿದೆ ಎಂದು ಹೇಳಿದರು.

ಸಾರ್ವಜನಿಕರ ತೆರಿಗೆ ಹಣವನ್ನು ಶಿಕ್ಷಣ, ಆರೋಗ್ಯ, ಉದ್ಯೋಗ, ಕೌಶಲಾಭಿವೃದ್ಧಿ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಬಳಸಬೇಕು. ಭ್ರಷ್ಟಾಚಾರದ ಆರೋಪ ಎದುರಿಸುತ್ತಿರುವ ಸಚಿವರನ್ನು ಸಂಪುಟದಿಂದ ಕೈಬಿಡಬೇಕು. ಇಲ್ಲದಿದ್ದರೆ ಬಿಜೆಪಿ ರಾಜ್ಯಾದ್ಯಂತ ಹೋರಾಟ ಮತ್ತು ಪ್ರತಿಭಟನೆ ನಡೆಸಲಿದೆ ಎಂದು ರಾಜು ಕುರುಡಗಿ ಎಚ್ಚರಿಕೆ ನೀಡಿದರು.

## ಮುಳಗುಂದದಲ್ಲಿ ರಾಜ್ಯ ಮಟ್ಟದ ಮೌಂಟೇನ್ ಬೈಕ್ ಸೈಕ್ಲಿಂಗ್ ಸ್ಪರ್ಧೆ

**ವಿಜಯಸಾಕ್ಷಿ ಸುದ್ದಿ, ಗದಗ**




ಕರ್ನಾಟಕ ರಾಜ್ಯ ಸೈಕ್ಲಿಂಗ್ ಅಸೋಸಿಯೇಷನ್ ಹಾಗೂ ಗದಗ ಜಿಲ್ಲಾ ಸೈಕ್ಲಿಂಗ್ ಅಸೋಸಿಯೇಷನ್ ಸಂಯುಕ್ತ ಆಶ್ರಯದಲ್ಲಿ 21ನೇ ರಾಜ್ಯಮಟ್ಟದ ಮೌಂಟೇನ್ ಬೈಕ್ ಸೈಕ್ಲಿಂಗ್ ಚಾಂಪಿಯನ್‌ಶಿಪ್ ಆಗಸ್ಟ್ 8 ಮತ್ತು 9ರಂದು ಗದಗ ಜಿಲ್ಲೆಯ ಮುಳಗುಂದ ಗ್ರಾಮದಲ್ಲಿ ನಡೆಯಲಿದೆ ಎಂದು ಗದಗ ಜಿಲ್ಲಾ ಸೈಕ್ಲಿಂಗ್ ಅಸೋಸಿಯೇಷನ್ ಅಧ್ಯಕ್ಷ ಜಿ. ವ್ಹಿ. ಪಾಟೀಲ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 14, 16, 18 ವರ್ಷದ ಬಾಲಕ-ಬಾಲಕಿಯರು, 20 ವರ್ಷದೊಳಗಿನ ಸ್ಪರ್ಧಿಗಳು ಹಾಗೂ ಮುಕ್ತ ಪುರುಷ ಮತ್ತು ಮಹಿಳೆಯರ ವಿಭಾಗಗಳಲ್ಲಿ ಒಟ್ಟು 10 ವಿಭಾಗಗಳಿಗೆ 18 ರೇಸ್‌ಗಳನ್ನು ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು. ಸೈಕ್ಲಿಂಗ್ ಕ್ರೀಡೆಯಲ್ಲಿ ರಸ್ತೆ, ಟ್ರ್ಯಾಕ್ ಹಾಗೂ ಮೌಂಟೇನ್ ಬೈಕ್ (ಎಂಟಿಬಿ) ಸ್ಪರ್ಧೆಗಳು ಪ್ರಮುಖವಾಗಿದ್ದು, ಭಾರತ ಈ ವಿಭಾಗದಲ್ಲಿ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಗಮನಾರ್ಹ ಸಾಧನೆ ಮಾಡಿದೆ ಎಂದು ಹೇಳಿದರು.

ಗದಗ ಜಿಲ್ಲೆಯ ಪವಿತ್ರಾ, ಕುರ್ತಕೋಟಿ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಕಳೆದ ವರ್ಷ ಪ್ರಿಯಾಂಕಾ ಲಮಾಣಿ ಮತ್ತು ಸೌಂದರ್ಯ ಅಂತಃಪುರ ರಾಷ್ಟ್ರೀಯ ಮಟ್ಟದಲ್ಲಿ ಪದಕ ಗೆದ್ದರೆ, ಭಾಗ್ಯ ಮೇಲ್ಮನಿ ಹಾಗೂ ಪಲ್ಲವಿ ಕುರಿ ರಾಷ್ಟ್ರಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಿ ಜಿಲ್ಲೆಗೆ ಹೆಸರು ತಂದಿದ್ದಾರೆ ಎಂದು ತಿಳಿಸಿದರು.

ಉತ್ತರ ಕರ್ನಾಟಕದಲ್ಲಿ ಗದಗ ಜಿಲ್ಲೆ ಮೌಂಟೇನ್ ಬೈಕ್ ಸೈಕ್ಲಿಂಗ್‌ನಲ್ಲಿ ಮುಂಚೂಣಿಯಲ್ಲಿದ್ದು, ಬೆಂಗಳೂರು ಮತ್ತು ಮೈಸೂರು ಕೂಡ ಈ ಕ್ರೀಡೆಯಲ್ಲಿ ಪ್ರತಿಭಾವಂತ ಕ್ರೀಡಾಪಟುಗಳನ್ನು ಹೊಂದಿವೆ. ಸ್ಟಾರ್ ವರ್ಜಾರಿ, ಕಿರಣ ರಾಜು, ಕಿಶೋರ ಹಾಗೂ ಧನಂಜಯ ತಿಪ್ಪಣ್ಣವರ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಪದಕಗಳನ್ನು ಗೆದ್ದು ರಾಜ್ಯದ ಕೀರ್ತಿ ಹೆಚ್ಚಿಸಿದ್ದಾರೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಎಸ್.ಎಂ. ಪೂಜಾರ, ಎಸ್. ವ್ಹಿ. ಕಣವಿ, ವಿಜಯ ನೀಲಗುಂದ, ಬಿ. ವ್ಹಿ. ಸುಂಕದ, ನಿಂಗರೆಡ್ಡಿ ತೇರಿನಗಡ್ಡಿ, ನಿಜಗುಣಿ ಕಾಂಬ್ಳೆ, ದಾವಲಸಾಬ್ ಕುರ್ತಕೋಟಿ ಹಾಗೂ ಚಂದ್ರು ದೊಡ್ಡಮನಿ ಉಪಸ್ಥಿತರಿದ್ದರು.


## ಸಂಕ್ಷಿಪ್ತ ಸುದ್ದಿಗಳು

### 13 ವರ್ಷ ಹಳೆಯ ಲೈಂಗಿಕ ದೌರ್ಜನ್ಯ ಪ್ರಕರಣ

# ತೆಹಲ್ಕಾ ಮಾಜಿ ಸಂಪಾದಕ ತರುಣ್ ತೇಜ್‌ಪಾಲ್ ದೋಷಿ

**ವಿಜಯಸಾಕ್ಷಿ ಸುದ್ದಿ, ಪಣಜಿ**

2013ರಲ್ಲಿ ದೇಶವನ್ನೇ ಬೆಚ್ಚಿಬೀಳಿಸಿದ್ದ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ತೆಹಲ್ಕಾ ನಿಯತಕಾಲಿಕೆಯ ಮಾಜಿ ಸಂಪಾದಕ-ಇನ್-ಚೀಫ್ ತರುಣ್ ತೇಜ್‌ಪಾಲ್ ಅವರನ್ನು ಬಾಂಬೆ ಹೈಕೋರ್ಟ್‌ನ ಗೋವಾ ಪೀಠ ದೋಷಿ ಎಂದು ಘೋಷಿಸಿದೆ.



ಗೋವಾ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿಯನ್ನು ಪುರಸ್ಕರಿಸಿದ ನ್ಯಾಯಾಲಯ, ಸೇಷನ್ಸ್ ಕೋರ್ಟ್ ನೀಡಿದ್ದ ಖುಲಾಸೆ ತೀರ್ಪನ್ನು ರದ್ದುಗೊಳಿಸಿ ಮಹತ್ವದ ಆದೇಶ ಹೊರಡಿಸಿದೆ.

ನ್ಯಾಯಮೂರ್ತಿಗಳಾದ ಡಾ. ನೀಲಾ ಗೋಖಲೆ ಹಾಗೂ ಅಮಿತ್ ಜಮಸಂಡೇಕರ್ ಅವರನ್ನೊಳಗೊಂಡ ವಿಭಾಗೀಯ ಪೀಠವು ಭಾರತೀಯ ದಂಡ ಸಂಹಿತೆಯ ಸೆಕ್ಷನ್ 376(2)(f), 376(2)(k) (ಅತ್ಯಾಚಾರ) ಹಾಗೂ ಸೆಕ್ಷನ್ 354A ಮತ್ತು 354B (ಲೈಂಗಿಕ ಕಿರುಕುಳ) ಅಡಿಯಲ್ಲಿ 62 ವರ್ಷದ ತರುಣ್ ತೇಜ್‌ಪಾಲ್ ಅವರನ್ನು ದೋಷಿ ಎಂದು ತೀರ್ಮಾನಿಸಿದೆ.

ಶಿಕ್ಷೆಯ ಪ್ರಮಾಣವನ್ನು ಮಧ್ಯಾಹ್ನ 2.30ಕ್ಕೆ ಪ್ರಕಟಿಸುವುದಾಗಿ ನ್ಯಾಯಾಲಯ ತಿಳಿಸಿದೆ.ಈ ಪ್ರಕರಣವು 2013ರ ನವೆಂಬರ್‌ನಲ್ಲಿ ಗೋವಾದ ಪಂಚತಾರಾ ಹೋಟೆಲ್‌ನಲ್ಲಿ ನಡೆದ ಥಿಂಕ್‌ಫೆಸ್ಟ್' ಕಾರ್ಯಕ್ರಮದ ವೇಳೆ ನಡೆದಿತ್ತು. ಲಿಫ್ಟ್‌ನಲ್ಲಿ ತರುಣ್ ತೇಜ್‌ಪಾಲ್ ತಮ್ಮ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಅವರ ಕಿರಿಯ ಮಹಿಳಾ ಸಹೋದ್ಯೋಗಿ ಆರೋಪಿಸಿದ್ದರು. ಈ ಪ್ರಕರಣದಲ್ಲಿ 2021ರಲ್ಲಿ ಮಾಪುಸಾ ಸೇಷನ್ಸ್ ನ್ಯಾಯಾಲಯ ತೇಜ್‌ಪಾಲ್ ಅವರನ್ನು ಖುಲಾಸೆಗೊಳಿಸಿತ್ತು. ಇದನ್ನು ಪ್ರಶ್ನಿಸಿ ಗೋವಾ ಸರ್ಕಾರ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿತ್ತು.

ತೀರ್ಪು ಪ್ರಕಟಿಸುವ ವೇಳೆ ನ್ಯಾಯಾಲಯದಲ್ಲೇ ಹಾಜರಿದ್ದ ತೇಜ್‌ಪಾಲ್, ಶಿಕ್ಷೆ ನಿಗದಿಗೂ ಮುನ್ನ ತಮ್ಮ ವಯಸ್ಸು ಮತ್ತು ಕುಟುಂಬದ ಪರಿಸ್ಥಿತಿಯನ್ನು ಪರಿಗಣಿಸಿ ಶಿಕ್ಷೆಯಲ್ಲಿ ಸಡಿಲಿಕೆ ನೀಡುವಂತೆ ಮನವಿ ಮಾಡಿದರು. ನನಗೆ ಈಗ 62 ವರ್ಷ. ಈ ಪ್ರಕರಣದಲ್ಲಿ ನಾನೇ ಸಂತ್ರಸ್ತ ಎಂದು ಭಾವಿಸುತ್ತೇನೆ. ನನಗೆ ಪತ್ನಿ ಇದ್ದಾಳೆ. ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುವ ಅವಕಾಶ ನೀಡಬೇಕು ಎಂದು ಕೋರಿದರು.

ತೇಜ್‌ಪಾಲ್ ಪರ ಹಿರಿಯ ವಕೀಲ ಆಬಾದ್ ಪೋಂಡಾ, ಘಟನೆ ನಡೆದು 13 ವರ್ಷಗಳಾಗಿವೆ ಹಾಗೂ ಅವರ ವಿರುದ್ಧ ಬೇರೆ ಯಾವುದೇ ಅಪರಾಧ ಪ್ರಕರಣಗಳಿಲ್ಲ. ಹೀಗಾಗಿ ಶಿಕ್ಷೆಯಲ್ಲಿ ಸಡಿಲಿಕೆ ನೀಡಬೇಕು ಮತ್ತು ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ತೀರ್ಪಿಗೆ ಎಂಟು ವಾರಗಳ ತಡೆ ನೀಡಬೇಕು ಎಂದು ವಿನಂತಿಸಿದರು.ಆದರೆ ಸರ್ಕಾರದ ಪರ ವಾದ ಮಂಡಿಸಿದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ತಂದೆಯ ಸ್ಥಾನದಲ್ಲಿದ್ದ ವ್ಯಕ್ತಿ ಮಗಳು ಸಮಾನವಾದ ಯುವತಿಯ ಮೇಲೆ ಇಂತಹ ಕೃತ್ಯ ಎಸಗಿದ್ದಾರೆ. ಸಂತ್ರಸ್ತೆ ನಿರಾಕರಿಸಿದರೂ ಕಿರುಕುಳ ಮುಂದುವರಿಸಿದ್ದಾರೆ. ಸಮಾಜಕ್ಕೆ ಸ್ಪಷ್ಟ ಸಂದೇಶ ರವಾನಿಸಲು ಕಠಿಣ ಶಿಕ್ಷೆ ಅಗತ್ಯ ಎಂದು ನ್ಯಾಯಾಲಯಕ್ಕೆ ಮನವರಿಕೆ ಮಾಡಿಕೊಟ್ಟರು.

# ಜಿಲ್ಲಾ ಶಿಕ್ಷಕರ ಸಂಘಕ್ಕೆ ಮೂವರು ನಾಮನಿರ್ದೇಶಿತ ಸದಸ್ಯರ ಆಯ್ಕೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಗದಗ ಜಿಲ್ಲಾ ಘಟಕಕ್ಕೆ ಲಕ್ಷ್ಮೇಶ್ವರ ತಾಲೂಕಿನಿಂದ ಶಿವಾನಂದ ಅಸುಂಡಿ, ಫಕ್ಕಿರೇಶ ತಳವಾರ ಹಾಗೂ ಅಶೋಕ ಅರಗಂಜಿ ಅವರನ್ನು ನಾಮನಿರ್ದೇಶಿತ ಸದಸ್ಯರಾಗಿ ಆಯ್ಕೆ ಮಾಡಲಾಗಿದೆ.ಗದಗದಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ, ಪದಗ್ರಹಣ ಹಾಗೂ ಧನ್ಯತಾ ಸಮರ್ಪಣಾ ಸಮಾರಂಭ2026ರಲ್ಲಿ ನೂತನ ನಾಮನಿರ್ದೇಶಿತ ಸದಸ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಎನ್. ಭರಮಗೌಡ್ರ, ಪ್ರಧಾನ ಕಾರ್ಯದರ್ಶಿ ಶ್ರೀಕಾಂತ ನಂದೆಣ್ಣವರ, ಸಹಕಾರ್ಯದರ್ಶಿ ಎಸ್.ವಿ. ಸೋಗಿ, ಸಂಘಟನಾ ಕಾರ್ಯದರ್ಶಿ ಮುತ್ತಣ್ಣ ಹುಬ್ಬಳ್ಳಿ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಸದಸ್ಯ ಎಂ.ಎಸ್. ಹಿರೇಮಠ, ಶಿರಹಟ್ಟಿ ಶಿಕ್ಷಕರ ಸಂಘದ ಅಧ್ಯಕ್ಷ ಶರಣಬಸವಗೌಡ ಪಾಟೀಲ, ಪರಮೇಶ್ವರ ಕಾಳಶೆಟ್ಟಿ, ಯಲ್ಲಪ್ಪ ತಿರಕಣ್ಣವರ, ಎಸ್.ಎಫ್. ಸುಣಗಾರ, ಫಕ್ಕಿರೇಶ ಡಂಬಳ, ಹಂಜಗಿ, ಗಿರೀಶ ನೇಕಾರ ಸೇರಿದಂತೆ ಹಲವರು ನೂತನ ಸದಸ್ಯರಿಗೆ ಶುಭಾಶಯ ಕೋರಿದರು.

### 10 ಕೋಟಿ ಪ್ರತಿಜ್ಞೆಗಳ ಮಹಾಭಿಯಾನದಲ್ಲಿ ವ್ಯಸನಮುಕ್ತ ಬದುಕಿನ ಶಪಥ

# ನಶೆಮುಕ್ತ ಭಾರತದತ್ತ ವಿದ್ಯಾರ್ಥಿಗಳ ಸಂಕಲ್ಪ

**ವಿಜಯಸಾಕ್ಷಿ ಸುದ್ದಿ, ಗದಗ**

ಯುವಜನತೆ ಯಾವುದೇ ರೀತಿಯ ಮಾದಕ ವ್ಯಸನಗಳಿಗೆ ಬಲಿಯಾಗದೆ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವ ಮೂಲಕ ಸದೃಢ ಹಾಗೂ ವಿಕಸಿತ ಭಾರತ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಹುಲಕೋಟಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಕುಮಾರಿ ಉಮಾ ಸಿಸ್ಟರ್ ಕರೆ ನೀಡಿದರು.

ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಎನ್‌ಎಸ್‌ಎಸ್, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಯುವ ರೆಡ್‌ಕ್ರಾಸ್ ಘಟಕಗಳ ಸಹಯೋಗದಲ್ಲಿ, ದಾದಿ ಪ್ರಕಾಶಮಣಿಜೀ ಅವರ ಪವಿತ್ರ ಸ್ಮರಣಾರ್ಥ ಹಾಗೂ 'ನಶೆ ಮುಕ್ತ ಭಾರತ ಅಭಿಯಾನ' ಮತ್ತು 'ಮಿಷನ್ ಸ್ಪಂದನ' ಅಡಿಯಲ್ಲಿ ಆಯೋಜಿಸಿದ್ದ '10 ಕೋಟಿ ನಶೆಮುಕ್ತ ಪ್ರತಿಜ್ಞೆಗಳ ಮಹಾಭಿಯಾನ' ಕಾರ್ಯಕ್ರಮದಲ್ಲಿ ಮಾತನಾಡಿದರು. ವಿದ್ಯಾರ್ಥಿಗಳಿಗೆ ವ್ಯಸನಮುಕ್ತ ಜೀವನದ ಪ್ರಮಾಣವಚನ ಬೋಧಿಸಿದ ಅವರು, ಮಾದಕ ವ್ಯಸನದ ಸಾಮಾಜಿಕ, ಮಾನಸಿಕ ಹಾಗೂ ಆರ್ಥಿಕ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಿ, ಯುವಜನರು ತಮ್ಮ ಆರೋಗ್ಯದ ಜೊತೆಗೆ ಕುಟುಂಬ ಮತ್ತು ಸಮಾಜದ ಹಿತವನ್ನೂ ಕಾಪಾಡಬೇಕು ಎಂದು ಹೇಳಿದರು.

ಎನ್‌ಎಸ್‌ಎಸ್ ಘಟಕದ ಸಂಯೋಜಕ ವಿಜಯಕುಮಾರ ಎಸ್. ಕಾರ್ಯಕ್ರಮ ಸಂಘಟಿಸಿ ಸ್ವಾಗತಿಸಿದರು. ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕದ ಸಂಯೋಜಕರಾದ ಬುಳ್ಳಪ್ಪ ಹಾಗೂ ಸಾವಿತ್ರಿ ಟಿ., ಯುವ ರೆಡ್‌ಕ್ರಾಸ್ ಘಟಕದ ಸಂಯೋಜಕ ಭೀಮೇಶ ಮಾತನಾಡಿದರು. ಸಾಂಸ್ಕೃತಿಕ ಘಟಕದ ಸಂಯೋಜಕ ರಮೇಶ ಹುಲಕುಂದ ಕಾರ್ಯಕ್ರಮ ನಿರೂಪಿಸಿದರು. ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ದಿನಗೂಲಿ ₹382ಕ್ಕೆ ಏರಿಕೆ | ವರ್ಷಕ್ಕೆ ₹47,750 ಗಳಿಕೆಗೆ ಅವಕಾಶ

# 125 ದಿನಗಳ ಉದ್ಯೋಗ ಖಾತರಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗ್ರಾಮೀಣ ಕೂಲಿ ಕಾರ್ಮಿಕರಿಗೆ ಹೆಚ್ಚು ದಿನಗಳ ಉದ್ಯೋಗ ಹಾಗೂ ಹೆಚ್ಚುವರಿ ಆದಾಯ ಕಲ್ಪಿಸುವ ಉದ್ದೇಶದಿಂದ ಜಾರಿಯಲ್ಲಿರುವ ವಿಬಿ-ಜಿ ರಾಮ್‌ಜಿ ಯೋಜನೆ ಕಾಮಗಾರಿಗಳನ್ನು ಗ್ರಾಮೀಣ ಉದ್ಯೋಗ ಇಲಾಖೆಯ ಸಹಾಯಕ ನಿರ್ದೇಶಕ ಕೃಷ್ಣಪ್ಪ ಧರ್ಮರ ಗುರುವಾರ ಪರಿಶೀಲಿಸಿದರು.

ತಾಲೂಕಿನ ಶಿಗ್ಲಿ, ದೊಡ್ಡೂರು, ಬಾಲೆಹೊಸೂರು, ಹುಲ್ಲೂರು, ಅಡರಕಟ್ಟಿ ಹಾಗೂ ಆದರಳ್ಳಿ ಗ್ರಾಮ ಪಂಚಾಯಿತಿಗಳಲ್ಲಿ ನಡೆಯುತ್ತಿರುವ ಕಾಮಗಾರಿಗಳಿಗೆ ಭೇಟಿ ನೀಡಿದ ಅವರು, ಕಾಮಗಾರಿಗಳ ಗುಣಮಟ್ಟ, ಹಾಜರಾತಿ ಹಾಗೂ ಯೋಜನೆಯ ಅನುಷ್ಠಾನವನ್ನು ಪರಿಶೀಲಿಸಿ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ಈ ವೇಳೆ ಮಾತನಾಡಿದ ಅವರು, ಯೋಜನೆಯಡಿ ದಿನಗೂಲಿಯನ್ನು ₹370ರಿಂದ ₹382ಕ್ಕೆ ಹೆಚ್ಚಿಸಲಾಗಿದೆ. ಹಿಂದಿನ 100 ದಿನಗಳ ಉದ್ಯೋಗಾವಧಿಯನ್ನು 125 ದಿನಗಳಿಗೆ ವಿಸ್ತರಿಸಲಾಗಿದ್ದು, ಕೂಲಿ ಕಾರ್ಮಿಕರಿಗೆ ಹೆಚ್ಚಿನ ಆದಾಯ ಗಳಿಸುವ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಯೋಜನೆಯಡಿ 318 ಕಾಮಗಾರಿಗಳಿಗೆ ಅವಕಾಶ ಕಲ್ಪಿಸಲಾಗಿದ್ದು, ಒಬ್ಬ ಗ್ರಾಮೀಣ ಉದ್ಯೋಗ ಖಾತರಿ ಕಾರ್ಡ್ ಹೊಂದಿರುವ ಕೂಲಿ ಕಾರ್ಮಿಕರು ವರ್ಷಕ್ಕೆ ಸುಮಾರು ₹47,750 ವರೆಗೆ ಆದಾಯ ಗಳಿಸಬಹುದಾಗಿದೆ ಎಂದು ಹೇಳಿದರು.ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗುವಂತೆ 60 ದಿನಗಳ ವಿರಾಮ ನೀಡಲಾಗಿದ್ದು, ಕೆಲಸಕ್ಕೆ ಬರುವ ಪ್ರತಿಯೊಬ್ಬ ಕಾರ್ಮಿಕರೂ ಎನ್‌ಎಂಎಂಎಸ್ (ಫೇಖಖಖ) ಮೂಲಕ ದಿನಕ್ಕೆ ಎರಡು ಬಾರಿ ಹಾಜರಾತಿ ದಾಖಲಿಸುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು. ಗ್ರಾಮ ಪಂಚಾಯಿತಿಯಲ್ಲಿ ಅರ್ಜಿ-6 ಸಲ್ಲಿಸುವ ಮೂಲಕ ಕೆಲಸಕ್ಕೆ ಬೇಡಿಕೆ ನೀಡಿ ಉದ್ಯೋಗ ಪಡೆಯಬಹುದಾಗಿದ್ದು, ಯಾವುದೇ ಅರ್ಹ ಕಾರ್ಮಿಕರು ಯೋಜನೆಯಿಂದ ವಂಚಿತರಾಗಬಾರದು ಎಂದು ಕರೆ ನೀಡಿದರು.

> ಉದ್ಯೋಗ ಖಾತರಿ ಯೋಜನೆ ಗ್ರಾಮೀಣ ಕೂಲಿ ಕಾರ್ಮಿಕರ ಬದುಕಿಗೆ ಆರ್ಥಿಕ ಭದ್ರತೆ ನೀಡುವ ಶಕ್ತಿಯುತ ಯೋಜನೆ. ಪ್ರತಿಯೊಬ್ಬ ಅರ್ಹ ಕಾರ್ಮಿಕರೂ ಇದರ ಸಂಪೂರ್ಣ ಪ್ರಯೋಜನ ಪಡೆಯಬೇಕು.
> - ಕೃಷ್ಣಪ್ಪ ಧರ್ಮರ, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ)

ಪರಿಶೀಲನೆ ವೇಳೆ ಪಿಡಿಒಗಳಾದ ರವಿ ಕೊರಕನವರ, ರಿಯಾಜ್ ಖಾದಿಬ್, ಮಾದರ, ಗೋವಿಂದ ರೆಡ್ಡಿ, ಕೆ.ಸಿ. ಕಡೂರು, ಕಾರ್ಯದರ್ಶಿ ಕವಿತಾ ಅಣ್ಣಿಗೇರಿ, ತಾಂತ್ರಿಕ ಸಂಯೋಜಕ ಹರೀಶ್ ಸೊಬರದ, ತಾಂತ್ರಿಕ ಸಹಾಯಕ ಶ್ರೀನಿವಾಸ್, ಫಕೀರೇಶ್ ನಿಟ್ಟಾಲಿ, ಶ್ರೀಧರ್ ಕುಲಕರ್ಣಿ, ಪ್ರವೀಣ ಕರಕನಗೌಡ್ರು, ಕಾಸಿಂಸಾಬ್ ನದಾಫ್, ಸತೀಶ್ ಅರಿಶಿಣದ, ತಿರುಕಪ್ಪ ಬಾಲೆಹೊಸೂರು, ಶಿಲ್ಪ ಲಮಾಣಿ, ಮಂಜುಳಾ ಕಟ್ಟಿಮನಿ, ಗೌರಮ್ಮ ಲಮಾಣಿ, ಪರಮೇಶ್ ಲಮಾಣಿ, ವಿನೋದ್ ಲಮಾಣಿ ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ಉಪಸ್ಥಿತರಿದ್ದರು.

### ಗುರುಪೂರ್ಣಿಮೆ ಅಂಗವಾಗಿ ಹರ್ಲಾಪೂರ ಶ್ರೀಮಠದಲ್ಲಿ ವಿಶೇಷ ಪೂಜೆ, ಧರ್ಮೋಪದೇಶ

# ಗುರುವಿನ ಕೃಪೆಯೇ ಬದುಕಿನ ಶ್ರೇಷ್ಠ ಸಂಪತ್ತು



**ವಿಜಯಸಾಕ್ಷಿ ಸುದ್ದಿ, ಗದಗ**

ಹರ್ಲಾಪೂರದ ಬಸವಾನಂದ ಶಿವಯೋಗಿಗಳ ಶ್ರೀಮಠದಲ್ಲಿ ಗುರುಪೂರ್ಣಿಮೆ ಅಂಗವಾಗಿ ವಿಶೇಷ ಧಾರ್ಮಿಕ ಕಾರ್ಯಕ್ರಮಗಳನ್ನು ಶ್ರದ್ಧಾ-ಭಕ್ತಿಯಿಂದ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮಠದ ಪೂಜ್ಯ ಫಕ್ಕೀರಯ್ಯ ಸ್ವಾಮೀಜಿ ಇಷ್ಟಲಿಂಗ ಪೂಜೆ ಹಾಗೂ ಪಾದಪೂಜೆ ನೆರವೇರಿಸಿ ಭಕ್ತರಿಗೆ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗುರುವಿನ ಚರಣದಿಂದಲೇ ಜಗತ್ತು ಜಯಂಕರಿಸಿದೆ. ಅಜ್ಞಾನವನ್ನು ದೂರ ಮಾಡಿ ಜ್ಞಾನದೆಡೆಗೆ ಕರೆದೊಯ್ಯುವವರೇ ಗುರು. ಆದ್ದರಿಂದ ಗುರುವಿನ ಸ್ಥಾನ ಜಗತ್ತಿನಲ್ಲಿ ಶ್ರೇಷ್ಠ ಎಂದು ಹೇಳಿದರು.

ಹಿಂದೂ ಸಂಪ್ರದಾಯದಲ್ಲಿ ಆಷಾಢ ಹುಣ್ಣಿಮೆಯನ್ನು ಗುರುಪೂರ್ಣಿಮೆಯಾಗಿ ಆಚರಿಸಲಾಗುತ್ತದೆ. ಈ ದಿನ ಗುರುಗಳಿಗೆ ಪೂಜೆ ಸಲ್ಲಿಸುವುದರೊಂದಿಗೆ ಅವರ ಮಾರ್ಗದರ್ಶನವನ್ನು ಸ್ಮರಿಸಲಾಗುತ್ತದೆ.

> ಅಜ್ಞಾನವನ್ನು ದೂರ ಮಾಡಿ ಜ್ಞಾನದ ಬೆಳಕಿನತ್ತ ಕರೆದೊಯ್ಯುವವರೇ ಗುರು; ಗುರುವಿನ ಸ್ಥಾನ ಎಲ್ಲಕ್ಕಿಂತ ಶ್ರೇಷ್ಠ.
> - ಫಕ್ಕೀರಯ್ಯ ಸ್ವಾಮೀಜಿ

ಗುರು ಎನ್ನುವ ಪದದ ಅರ್ಥವೇ ಅಜ್ಞಾನವೆಂಬ ಅಂಧಕಾರವನ್ನು ದೂರ ಮಾಡಿ ಜ್ಞಾನ ನೀಡುವವನು ಎಂಬುದಾಗಿದೆ ಎಂದು ವಿವರಿಸಿದರು.

ಭಾರತದ ಇತಿಹಾಸದಲ್ಲಿ ಗುರು-ಶಿಷ್ಯ ಪರಂಪರೆ ಅತ್ಯಂತ ಶ್ರೇಷ್ಠವಾದದ್ದು. ಗುರುಗೋವಿಂದ ಭಟ್ಟರುಶರೀಫ ಸಾಹೇಬರು, ಅಡವಿ ಸಿದ್ದೇಶ್ವರರುನಾಗಲಿಂಗಪ್ಪ, ಗಜದಂಡ ಶಿವಯೋಗಿಗಳುಸಿದ್ಧಾರೂಢರು, ಪಂಚಾಕ್ಷರಿ ಗವಾಯಿಗಳುಪುಟ್ಟರಾಜ ಗವಾಯಿಗಳು ಸೇರಿದಂತೆ ಅನೇಕ ಮಹನೀಯರ ಗುರು-ಶಿಷ್ಯ ಸಂಬಂಧ ಸಮಾಜಕ್ಕೆ ಆದರ್ಶವಾಗಿದೆ ಎಂದು ತಿಳಿಸಿದರು.

ವೇದವ್ಯಾಸ ಮಹರ್ಷಿಗಳ ಜನ್ಮದಿನವಾಗಿಯೂ ಗುರುಪೂರ್ಣಿಮೆಯನ್ನು ಆಚರಿಸಲಾಗುತ್ತದೆ. ಯೋಗ ಸಂಪ್ರದಾಯದಲ್ಲಿ ಶಿವನು ಸಪ್ತರ್ಷಿಗಳಿಗೆ ಯೋಗವಿದ್ಯೆ ಬೋಧಿಸಿದ ದಿನವೆಂಬ ನಂಬಿಕೆಯೂ ಇದೆ. ಆದ್ದರಿಂದ ಈ ಹಬ್ಬಕ್ಕೆ ಧಾರ್ಮಿಕ ಹಾಗೂ ಶೈಕ್ಷಣಿಕ ಕ್ಷೇತ್ರದಲ್ಲಿಯೂ ವಿಶೇಷ ಮಹತ್ವವಿದೆ ಎಂದು ಹೇಳಿದರು.

ಚಾತುರ್ಮಾಸದ ಅವಧಿಯಲ್ಲಿ ಸನ್ಯಾಸಿಗಳು ಒಂದೇ ಸ್ಥಳದಲ್ಲಿ ತಂಗಿ ಧರ್ಮ ಪ್ರವಚನಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸುತ್ತಾರೆ. ಗುರು-ಶಿಷ್ಯರ ಸಂಬಂಧವು ಸಮಾಜದ ಸಂಸ್ಕೃತಿ ಮತ್ತು ಮೌಲ್ಯಗಳನ್ನು ಗಟ್ಟಿಗೊಳಿಸುವ ಶಕ್ತಿಯಾಗಿದೆ ಎಂದು ಸ್ವಾಮೀಜಿ ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಶ್ರೀ ಬಸವಾನಂದ ಸಾಂಸ್ಕೃತಿಕ ಸೇವಾ ಸಂಸ್ಥೆಯ ಸಹ ಕಾರ್ಯದರ್ಶಿ ಕಿಡಿಗಣ್ಣಸ್ವಾಮಿ ವಂದಿಸಿದರು. ಸಂಸ್ಥೆಯ ಕಾರ್ಯದರ್ಶಿ ಸದಾನಂದ ಶಾಸ್ತ್ರಿಗಳು ಕಾರ್ಯಕ್ರಮದ ಮಾಹಿತಿ ನೀಡಿದರು.

# ಸರ್ಕಾರಿ ಶಾಲೆಗೆ ಎಐ ತಂತ್ರಜ್ಞಾನದ ಸ್ಪರ್ಶ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಕೃತಕ ಬುದ್ಧಿಮತ್ತೆ (ಎಐ) ಆಧುನಿಕ ಶಿಕ್ಷಣದ ಅವಿಭಾಜ್ಯ ಅಂಗವಾಗಿದ್ದು, ಗ್ರಾಮೀಣ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಎಐ ತಂತ್ರಜ್ಞಾನ ಸಹಕಾರಿಯಾಗಲಿದೆ ಎಂದು ಪಟ್ಟಣದ ಸರ್ಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ)ಯ ಪ್ರಧಾನಗುರು ಎಸ್.ಎಚ್. ಪೂಜಾರ ಹೇಳಿದರು.

ಶಾಲೆಯಲ್ಲಿ ಎಐ ಶಿಕ್ಷಕಿಯಾಗಿ ಸೌಭಾಗ್ಯ ಕೊಲ್ಲಾರಿ ಅವರನ್ನು ನೇಮಕ ಮಾಡಿಕೊಂಡು ಮಾತನಾಡಿದ ಅವರು, ಎಐ ತಂತ್ರಜ್ಞಾನ ಕೇವಲ ನಗರ ಪ್ರದೇಶಗಳಿಗೆ ಸೀಮಿತವಾಗದೆ, ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೂ ಗುಣಮಟ್ಟದ ಶಿಕ್ಷಣ ಒದಗಿಸುವಲ್ಲಿ ಮಹತ್ವದ ಪಾತ್ರ ವಹಿಸಲಿದೆ.

ಸರ್ಕಾರದ ಈ ಕ್ರಮದಿಂದ ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯ ಮತ್ತಷ್ಟು ವೃದ್ಧಿಯಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಎಂ.ಎಚ್. ಮಾನೇಗಾರ, ಶಿಕ್ಷಕರಾದ ನೂರಹ್ಮದ್ ನದಾಫ್, ಬಸವರಾಜ ಗೌರಿಮನಿ, ಮಂಜುನಾಥ ಕಲ್ಯಾಣಮಠ, ಗೀತಾ ಪಾಟೀಲ್, ಎಸ್.ವಿ. ತಿಮ್ಮಾಪೂರ, ಗೀತಾ ಕುಂದರಗಿ, ಕವಿತಾ ಬಿನ್ನಾಳ ಹಾಗೂ ಸೌಭಾಗ್ಯ ಕೊಲ್ಲಾರಿ ಉಪಸ್ಥಿತರಿದ್ದರು.

# ಉಲುವತ್ತಿ ಪಿಎಸಿಎಸ್‌ಗೆ ಕನ್ನಿಹಳ್ಳಿ ಚಂದ್ರಶೇಖರ್ ಅವಿರೋಧ ಆಯ್ಕೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಉಲುವತ್ತಿ ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಕೃಷಿ ಸಹಕಾರ ಸಂಘದ ಆಡಳಿತ ಮಂಡಳಿ ಚುನಾವಣೆಯಲ್ಲಿ ಕನ್ನಿಹಳ್ಳಿ ಚಂದ್ರಶೇಖರ್ ಅಧ್ಯಕ್ಷರಾಗಿ ಹಾಗೂ ಎಚ್. ರಾಮಪ್ಪ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು. ಪದಗ್ರಹಣದ ಬಳಿಕ ಮಾತನಾಡಿದ ನೂತನ ಅಧ್ಯಕ್ಷ ಕನ್ನಿಹಳ್ಳಿ ಚಂದ್ರಶೇಖರ್, ಸಂಘದಲ್ಲಿ ಸುಮಾರು 70ಕ್ಕೂ ಹೆಚ್ಚು ರೈತರು ಸಾಲ ಮರುಪಾವತಿ ಮಾಡದ ಹಿನ್ನೆಲೆಯಲ್ಲಿ ನ್ಯಾಯಾಲಯದಲ್ಲಿ ಪ್ರಕರಣಗಳು ದಾಖಲಾಗಿವೆ.

ರೈತರ ಪರವಾಗಿ ಸಂಘ ಸದಾ ಧ್ವನಿಯಾಗಲಿದ್ದು, ಅವರಿಗೆ ಅಗತ್ಯವಿರುವ ಎಲ್ಲ ರೀತಿಯ ಸಹಾಯ-ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಸಹಕಾರ ಸಂಘದಲ್ಲಿ ಯಾವುದೇ ರೀತಿಯ ಅಕ್ರಮಗಳಿಗೆ ಅವಕಾಶ ನೀಡುವುದಿಲ್ಲ. ಒಂದು ನಯಾಪೈಸೆಯೂ ದುರುಪಯೋಗವಾಗದಂತೆ ಪಾರದರ್ಶಕ ಆಡಳಿತ ನೀಡುತ್ತೇವೆ ಎಂದು ಅವರು ಹೇಳಿದರು.

ಸಭೆಯಲ್ಲಿ ನಿರ್ದೇಶಕರಾದ ಬಸವರಾಜ, ಮೋದೀನ್ ಸಾಹೇಬ್, ಶಾಂತಪ್ಪ ಎಂ.ಕೆ., ಓಮೇಶ್ ಹೊಸಪೇಟೆ, ಜಗದೀಶ ಟಿ., ಪ್ರಕಾಶ್ ದಾಸರ, ಭರತ್ ಸಿ., ನಾಗಮ್ಮ ಕನ್ನಿಹಳ್ಳಿ, ಶಕುಂತಲಮ್ಮ ಮುಟುಗನಹಳ್ಳಿ ಹಾಗೂ ಗರಗದ ಹನುಮಂತಪ್ಪ ಉಪಸ್ಥಿತರಿದ್ದರು.

ರಿಟರ್ನಿಂಗ್ ಅಧಿಕಾರಿ ವಿ. ಲೀಲಾವತಿ ಚುನಾವಣೆ ನಡೆಸಿಕೊಟ್ಟರು. ಬಿಡಿಸಿಸಿ ಬ್ಯಾಂಕ್ ಹಗರಿಬೊಮ್ಮನಹಳ್ಳಿ ಕ್ಷೇತ್ರಾಧಿಕಾರಿ ಪ್ರಕಾಶ್ ಹೆಬ್ಬಾರ್, ಮುಖ್ಯ ಕಾರ್ಯನಿರ್ವಾಹಕ ವೀರೇಶ್ ಭಾಗವಹಿಸಿದ್ದರು. ನಿರ್ದೇಶಕ ಓಮೇಶ್ ಹೊಸಪೇಟೆ ಸ್ವಾಗತಿಸಿ ವಂದಿಸಿದರು.

### ಧರ್ಮ, ಸಂಸ್ಕೃತಿ ಮತ್ತು ಸದ್ಗುಣಗಳಿಂದಲೇ ಸಮಾಜದಲ್ಲಿ ಶಾಂತಿ: ಶ್ರೀ ರಂಭಾಪುರಿ ಜಗದ್ಗುರುಗಳು

# ಆಧ್ಯಾತ್ಮವಿಲ್ಲದ ಬದುಕಿಗೆ ಉತ್ಕರ್ಷವಿಲ್ಲ



**ವಿಜಯಸಾಕ್ಷಿ ಸುದ್ದಿ, ದಾವಣಗೆರೆ**

ಮನುಷ್ಯನ ಬದುಕು ಭಗವಂತನ ಅಮೂಲ್ಯ ಕೊಡುಗೆಯಾಗಿದ್ದು, ಸುಖ-ಶಾಂತಿಯ ಜೀವನಕ್ಕೆ ಧರ್ಮವೇ ಆಶಾಕಿರಣ. ಉತ್ಕರ್ಷದ ಬದುಕು ಕಟ್ಟಿಕೊಳ್ಳಲು ಆಧ್ಯಾತ್ಮ ಜ್ಞಾನವೇ ಭದ್ರ ಅಡಿಪಾಯ ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ನಗರದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಮಂಗಲ ಭವನದಲ್ಲಿ ನಡೆದ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಮನಸ್ಸನ್ನು ಕೂಡಿಸುವ ಮತ್ತು ಧರ್ಮವನ್ನು ಕಟ್ಟುವ ಕಾರ್ಯ ಅತ್ಯಂತ ಮಹತ್ವದ್ದಾಗಿದೆ. ಭಾರತೀಯ ಸಂಸ್ಕೃತಿ ಹಾಗೂ ಪರಂಪರೆ ಜನಜೀವನದ ಮೇಲೆ ಅಪಾರ ಪ್ರಭಾವ ಬೀರಿದ್ದು,

ಎಲ್ಲ ಜಾತಿ-ಜನಾಂಗದವರು ಅದರ ಪಾವಿತ್ರ್ಯವನ್ನು ಕಾಪಾಡಬೇಕು ಎಂದು ಕರೆ ನೀಡಿದರು. ಇಂದಿನ ಅಶಾಂತಿ, ಅತೃಪ್ತಿ ಮತ್ತು ಅಸಹನೆಗೆ ತಾಳ್ಮೆ ಹಾಗೂ ಸಹನೆಯ ಕೊರತೆಯೇ ಪ್ರಮುಖ ಕಾರಣ ವಾಗಿದೆ. ವೀರಶೈವ ಧರ್ಮದಲ್ಲಿ ವಿಶ್ವಬಂಧು ತ್ವದ ತತ್ವವನ್ನು ಶ್ರೀ ಜಗದ್ಗುರು ರೇಣುಕಾಚಾಯರು ಹಾಗೂ ಶಿವಶರಣರು ಉಳಿಸಿ ಬೆಳೆಸಿದ್ದಾರೆ. ಅಶುಭ ಮಾಸವೆಂದು ಪರಿಗಣಿಸಲ್ಪಡುವ ಆಷಾಢವನ್ನು ಇಷ್ಟಲಿಂಗ ಪೂಜೆಯ ಮೂಲಕ ಶುಭಮಾಸವನ್ನಾಗಿ ಪರಿವರ್ತಿಸಿದ ಕೀರ್ತಿ ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳಿಗೆ ಸಲ್ಲುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮ ಉದ್ಘಾಟಿಸಿದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಉಪಾಧ್ಯಕ್ಷ ಡಾ. ಅಥಣಿ ವೀರಣ್ಣ ಮಾತನಾಡಿ, ಧರ್ಮದ ಫಲ ಬೇಕೆನ್ನುವವರು ಮೊದಲು ಧರ್ಮವನ್ನು ಆಚರಿಸಬೇಕು. ಆರೋಗ್ಯ, ಶಿಕ್ಷಣ, ಕಾನೂನು ಮತ್ತು ಧರ್ಮದ ಮೌಲ್ಯಗಳನ್ನು ಪಾಲಿಸದ ಕಾರಣ ಸಮಾಜದಲ್ಲಿ ಅಸಮಾಧಾನ ಹೆಚ್ಚುತ್ತಿದೆ. ಜನಜಾಗೃತಿಗಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಕೈಗೊಂಡಿರುವ ಧರ್ಮಯಜ್ಞ ಎಲ್ಲರಿಗೂ ದಾರಿದೀಪವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಹೆಸರಾಂತ ಲೆಕ್ಕ ಪರಿಶೋಧಕ ಮುಂಡಾಸ್ ವೀರೇಂದ್ರ, ಕುಮಾರ್ ಅವರಿಗೆ ಲೆಕ್ಕ ಪರಿಶೋಧಕ ರತ್ನ ಪ್ರಶಸ್ತಿ ಪ್ರದಾನ ಮಾಡಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿದರು. ಉಪದೇಶಾಮೃತ ನೀಡಿದ ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶಿವಾಚಾರ್ಯರು, ಮನುಷ್ಯ ದೊಡ್ಡ ಮಾತುಗಳಿಗಿಂತ ದೊಡ್ಡ ಗುಣಗಳನ್ನು ಬೆಳೆಸಿಕೊಳ್ಳಬೇಕು. ಪೂರ್ವಜರು ನೀಡಿದ

> ಸುಖ-ಶಾಂತಿಯ ಬದುಕಿಗೆ ಧರ್ಮವೇ ಆಶಾಕಿರಣ; ಉತ್ಕರ್ಷದ ಜೀವನಕ್ಕೆ ಆಧ್ಯಾತ್ಮ ಜ್ಞಾನವೇ ನಿಜವಾದ ಅಡಿಪಾಯ.
> - ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು

ಉದಾತ್ತ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗಲೇ ಶ್ರೇಯಸ್ಸು ಸಾಧ್ಯ ಎಂದರು. ಕಾರ್ಯಕ್ರಮದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಉಪಾಧ್ಯಕ್ಷ ಅಣಬೇರು ರಾಜಣ್ಣ, ಸದಸ್ಯ ಎಸ್.ಕೆ. ವೀರಣ್ಣ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ಮಹಾನಗರ ಪಾಲಿಕೆ ವಿರೋಧ ಪಕ್ಷದ ಮಾಜಿ ನಾಯಕ ಎ. ನಾಗರಾಜ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿ ಶ್ರೀಗಳ ಆಶೀರ್ವಾದ ಪಡೆದರು. ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮೀಜಿ ನೇತೃತ್ವ ವಹಿಸಿ ಆಶೀರ್ವಚನ ನೀಡಿದರು. ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಗಣ್ಯರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಬೆಳಗಿನ ಜಾವ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಭಕ್ತರಿಗೆ ಆಶೀರ್ವಾದ ನೀಡಿದರು. ಬಳಿಕ ಅನ್ನದಾಸೋಹ ನಡೆಯಿತು.

# ಸ್ವಚ್ಛ ಭಾರತ ನಿರ್ಮಾಣಕ್ಕೆ ವಿದ್ಯಾರ್ಥಿಗಳ ಸಂಕಲ್ಪ




**ವಿಜಯಸಾಕ್ಷಿ ಸುದ್ದಿ, ಗದಗ**

ಮೇರಾ ಯುವ ಭಾರತ ಹಾಗೂ ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆ ವತಿಯಿಂದ, ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ಸಹಯೋಗದಲ್ಲಿ ಸ್ವಚ್ಛತಾ ಪಕ್ವಾಡ 2026-27 ಅಂಗವಾಗಿ ಕಾಲೇಜಿನಲ್ಲಿ ಸ್ವಚ್ಛತಾ ಪ್ರತಿಜ್ಞಾ ಕಾರ್ಯಕ್ರಮ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಸ್ವಚ್ಛತೆ, ನೈರ್ಮಲ್ಯ ಮತ್ತು ಪರಿಸರ ಸಂರಕ್ಷಣೆಗೆ ಬದ್ಧರಾಗುವಂತೆ ಪ್ರತಿಜ್ಞೆ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲೆ ಅನ್ನಪೂರ್ಣ ಹೊಸಮನಿ, ಎನ್‌ಎಸ್‌ಎಸ್ ಅಧಿಕಾರಿ ಶ್ರೀನಿವಾಸ ಬಡಿಗೇರ, ಸಿಬ್ಬಂದಿಗಳಾದ ರವಿ ಹೊಂಬಾಳಿ, ರೇವತಿ ಗೌಳಿ ಸೇರಿದಂತೆ ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಭಾಗವಹಿಸಿ ಸ್ವಚ್ಛತಾ ಪ್ರತಿಜ್ಞೆ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡರು.

ಸಂಕ್ಷಿಪ್ತ ಸುದ್ದಿಗಳು

## ಗದಗ ಬರಪೀಡಿತ ಜಿಲ್ಲೆಯನ್ನಾಗಿ ಘೋಷಣೆಗೆ ಆಗ್ರಹಿಸಿ ಮನವಿ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ತೀವ್ರ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕು, ಪ್ರತಿ ಎಕರೆಗೆ ₹50 ಸಾವಿರ ಬೆಳೆ ಪರಿಹಾರ ನೀಡಬೇಕು ಹಾಗೂ ರೈತರ ಕೃಷಿ ಸಾಲ ಮನ್ನಾ ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಸಂಘ ಹಾಗೂ ಹಸಿರು ಸೇನೆ (ರಿ) ಗದಗ ಜಿಲ್ಲಾ ಘಟಕವು ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ ಅವರಿಗೆ ಮನವಿ ಸಲ್ಲಿಸಿತು.

ಈ ಸಂದರ್ಭದಲ್ಲಿ ಶಾಸಕ ಎಚ್.ಕೆ. ಪಾಟೀಲ ಉಪಸ್ಥಿತರಿದ್ದರು.

ಮನವಿ ಸಲ್ಲಿಸಿ ಮಾತನಾಡಿದ ಕರ್ನಾಟಕ ರಾಜ್ಯ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಶಂಕರಗೌಡ ಜಾಯನಗೌಡ್ರ, 2026-27ನೇ ಸಾಲಿನಲ್ಲಿ ಸಮರ್ಪಕ ಮಳೆಯಾಗದ ಪರಿಣಾಮ ಜಿಲ್ಲೆಯ ರೈತರು ಬೆಳೆದ ಬೆಳೆಗಳು ಸಂಪೂರ್ಣ ಹಾನಿಗೊಳಗಾಗಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಆದ್ದರಿಂದ ಸರ್ಕಾರ ತಕ್ಷಣವೇ ಗದಗ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ರೈತರ ನೆರವಿಗೆ ಧಾವಿಸಬೇಕು ಎಂದು ಆಗ್ರಹಿಸಿದರು.

ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಮಾತನಾಡಿ, ಹೋಬಳಿ ಮಟ್ಟದಲ್ಲಿ ಗೋಶಾಲೆಗಳನ್ನು ಆರಂಭಿಸಿ ಮೇವು ಬ್ಯಾಂಕ್‌ಗಳನ್ನು ತೆರೆಯಬೇಕು. ಬೆಳೆ ನಷ್ಟಕ್ಕೆ ಪ್ರತಿ ಎಕರೆಗೆ ₹50 ಸಾವಿರ ಪರಿಹಾರ ಘೋಷಿಸಬೇಕು. ರಾಷ್ಟ್ರೀಕೃತ ಹಾಗೂ ಸಹಕಾರಿ ಬ್ಯಾಂಕುಗಳು ರೈತರಿಗೆ ನೀಡುತ್ತಿರುವ ಸಾಲ ವಸೂಲಾತಿ ನೋಟಿಸ್‌ಗಳನ್ನು ತಕ್ಷಣ ಸ್ಥಗಿತಗೊಳಿಸಿ, ರೈತರ ಕೃಷಿ ಸಾಲವನ್ನು ಮನ್ನಾ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸಂಘ ಹಾಗೂ ಹಸಿರು ಸೇನೆ, ರೈತ ಸಂಘದ ಪದಾಧಿಕಾರಿಗಳು ಮತ್ತು ಮುಖಂಡರು ಉಪಸ್ಥಿತರಿದ್ದರು.

## ಇಂದು ಪಿರಮಿಡ್ ಧ್ಯಾನ ಕೇಂದ್ರದ ವಾರ್ಷಿಕೋತ್ಸವ

**ವಿಜಯಸಾಕ್ಷಿ ಸುದ್ದಿ, ಗದಗ**



ನಗರದ ವಿವೇಕಾನಂದ ನಗರದ ಕರಿಯಮ್ಮಕಲ್ಲ ಬಡಾವಣೆಯಲ್ಲಿರುವ ಶ್ರೀ ಶಿವ ಚಿದಂಬರೇಶ್ವರ ಪಿರಮಿಡ್ ಧ್ಯಾನ ಕೇಂದ್ರದ ಪ್ರಥಮ ವಾರ್ಷಿಕೋತ್ಸವ ಸಮಾರಂಭವು ಆಗಸ್ಟ್ 8ರಂದು ಸಂಜೆ 5 ಗಂಟೆಗೆ ಕರಿಯಮ್ಮಕಲ್ಲ ದೇವಸ್ಥಾನ ಸಮೀಪದ ಶ್ರೀ ಮುಕ್ಕಣ್ಣೇಶ್ವರ ಸಮುದಾಯ ಭವನದಲ್ಲಿ ನಡೆಯಲಿದೆ.

ಬ್ರಹ್ಮರ್ಷಿ ಪಿತಾಮಹ ಡಾ. ಸುಭಾಷ್ ಪತ್ರಿಜಿ ಅವರ ದಿವ್ಯ ಪ್ರೇರಣೆಯೊಂದಿಗೆ ಹಾಗೂ ಪಿರಮಿಡ್ ಸ್ಪಿರಿಚ್ಯುವಲ್ ಸೊಸೈಟಿ ಮೂವ್‌ಮೆಂಟ್ ಆಶ್ರಯದಲ್ಲಿ ನಿರ್ಮಾಣಗೊಂಡಿರುವ ಧ್ಯಾನ ಕೇಂದ್ರದ ವಾರ್ಷಿಕೋತ್ಸವದ ಅಂಗವಾಗಿ ವಿವಿಧ ಆಧ್ಯಾತ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಸೀತಾಗಿರಿ ಹಾಗೂ ಅಣ್ಣಿಗೇರಿಯ ಗಿರೀಶ ಆಶ್ರಮದ ಡಾ. ಎ.ಸಿ. ವಾಲಿ ಮಹಾರಾಜರು ವಹಿಸಲಿದ್ದು, ಮುಕ್ಕಣ್ಣೇಶ್ವರ ಮಠದ ಸದ್ಗುರು ಶ್ರೀ ಶಂಕರಾನಂದ ಸ್ವಾಮೀಜಿ ಸಮ್ಮುಖ ವಹಿಸಲಿದ್ದಾರೆ.

ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಪಿರಮಿಡ್ ಸೇವೆಯ ರಾಜ್ಯಾಧ್ಯಕ್ಷ ಹಾಗೂ ಬಳ್ಳಾರಿ ಪಿಎಂಸಿ ವ್ಯವಸ್ಥಾಪಕರಾದ ಹಂಪಣ್ಣ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಹುಬ್ಬಳ್ಳಿಯ ಹಿರಿಯ ಪಿರಮಿಡ್ ಮಾಸ್ಟರ್ ವಿಶಾಲಾಕ್ಷಿ ಆಕಳವಾಡಿ, ಶಂಕರಹಟ್ಟಿಯ ಹಿರಿಯ ಪಿರಮಿಡ್ ಮಾಸ್ಟರ್ ವಿಶಾಲಾಕ್ಷಿ ಅಥಣಿ, ಶ್ರೀ ಮಲ್ಲಿಕಾರ್ಜುನ ಪಿರಮಿಡ್ ಆಧ್ಯಾತ್ಮಿಕ ಧ್ಯಾನ ಕೇಂದ್ರದ ನಿರ್ಮಾತೃ ರಂಗಣ್ಣ ಕೋಳಿ ಹಾಗೂ ಬಾಗಲಕೋಟೆಯ ಹಿರಿಯ ಪಿರಮಿಡ್ ಮಾಸ್ಟರ್ ರಾಜಶೇಖರ ಅಡಿಕೇನವರ ಭಾಗವಹಿಸಲಿದ್ದಾರೆ.

ಗದಗ-ಬೆಟಗೇರಿ ಅವಳಿ ನಗರದ ಪಿರಮಿಡ್ ಮಾಸ್ಟರ್‌ಗಳು, ಧ್ಯಾನಾಸಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಪಿರಮಿಡ್ ಧ್ಯಾನ ಕೇಂದ್ರದ ನಿರ್ಮಾತೃ ಪಿ.ಡಿ. ಬಂಕಾಪೂರ ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧ ಆಯ್ಕೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ತಂಬ್ರಹಳ್ಳಿ ಎಣ್ಣೆಕಾಳು ಬೆಳೆಗಾರರ ಸಹಕಾರಿ ಸಂಘದ ನೂತನ ಅಧ್ಯಕ್ಷರಾಗಿ ಆನಂದ್ ಮಡಿವಾಳರ ಹಾಗೂ ಉಪಾಧ್ಯಕ್ಷರಾಗಿ ಉರಗಪ್ಪ ಕಿತ್ನೂರ್ ಅವಿರೋಧವಾಗಿ ಆಯ್ಕೆಯಾದರು.

ಆಯ್ಕೆಯಾದ ಬಳಿಕ ಮಾತನಾಡಿದ ಆನಂದ್ ಮಡಿವಾಳರ, ಎಣ್ಣೆಕಾಳು ಬೆಳೆಗಳು ರೈತರ ಆರ್ಥಿಕ ಸದೃಢತೆಗೆ ಪ್ರಮುಖವಾಗಿದ್ದು, ಸಂಘದ ಮೂಲಕ ರೈತರ ಹಿತಾಸಕ್ತಿ ಕಾಪಾಡಲು ಹಾಗೂ ಅವರಿಗೆ ಅಗತ್ಯ ಸಹಕಾರ ನೀಡಲು ಬದ್ಧರಾಗಿರುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಬಣಕಾರ್ ಕೊಟ್ರೇಶ್, ಸೊಬಟಿ ಹರೀಶ್, ಕಡ್ಡಿ ಚೆನ್ನಪ್ಪ, ಗಂಗಾಧರ್ ಗೌಡ್ರು, ದೇವಿಪ್ರಸಾದ್, ಮೂಲಿಮನಿ ರವಿಪ್ರಸಾದ್, ಹನುಮ ದೇಶದ, ಕಿತ್ನೂರ್ ಪಾಟೇಲ್, ಮಾರುತೇಶ ಮಡಿವಾಳರ, ಮಂಜುನಾಥ್, ಮೆಹಬೂಬ್ ಬಾಷಾ, ಜಿ. ಕೊಟ್ರೇಶ್, ಮಾಜಿ ಅಧ್ಯಕ್ಷ ಪರಶುರಾಮ, ಸುಣಗಾರ ಮ್ಯಾಗಳ ಮನೆ ಬಸವರಾಜ್, ದೇವರಾಜ್ ಹಾಗೂ ಸಂಘದ ಕಾರ್ಯದರ್ಶಿ ಎಸ್.ಎಂ. ಪ್ರವೀಣ್ ಕುಮಾರ್ ಸೇರಿದಂತೆ ಸದಸ್ಯರು ನೂತನ ಪದಾಧಿಕಾರಿಗಳನ್ನು ಅಭಿನಂದಿಸಿದರು.

ಬಾಣಂತಿಯರೊಂದಿಗೆ ನೇರ ಸಂವಾದ, ಲಿಫ್ಟ್ ದುರಸ್ತಿಗೆ ಸೂಚನೆ | ಕ್ರೀಡಾ ವಸತಿ ಶಾಲೆಯ ವಿದ್ಯಾರ್ಥಿಗಳ ಸಮಸ್ಯೆಗಳಿಗೂ ಕಿವಿ

# ಆಸ್ಪತ್ರೆ, ಕ್ರೀಡಾಂಗಣಕ್ಕೆ ಉಪಲೋಕಾಯುಕ್ತರ ಸರ್ಪ್ರೈಸ್ ವಿಸಿಟ್

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ದಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಹೆರಿಗೆ ಆಸ್ಪತ್ರೆ ಹಾಗೂ ಜಿಲ್ಲಾ ಕ್ರೀಡಾಂಗಣಕ್ಕೆ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಶುಕ್ರವಾರ ದಿಢೀರ್ ಭೇಟಿ ನೀಡಿ ಆಸ್ಪತ್ರೆ ಮತ್ತು ಕ್ರೀಡಾ ವಸತಿ ಶಾಲೆಯಲ್ಲಿನ ಸೌಲಭ್ಯಗಳನ್ನು ಪರಿಶೀಲಿಸಿದರು.



ಮೊದಲು ಮಹಿಳಾ ಮತ್ತು ಮಕ್ಕಳ ಹೆರಿಗೆ ಆಸ್ಪತ್ರೆಗೆ ಭೇಟಿ ನೀಡಿದ ಅವರು, ಹೆರಿಗೆ ವಾರ್ಡ್‌ನಲ್ಲಿ ದಾಖಲಾಗಿದ್ದ ಬಾಣಂತಿಯರೊಂದಿಗೆ ಸಂವಾದ ನಡೆಸಿ ಚಿಕಿತ್ಸೆ, ಆಹಾರ ಹಾಗೂ ಆಸ್ಪತ್ರೆಯಲ್ಲಿ ಒದಗಿಸಲಾಗುತ್ತಿರುವ ಸೌಲಭ್ಯಗಳ ಕುರಿತು ಮಾಹಿತಿ ಪಡೆದರು. ಆಸ್ಪತ್ರೆಯ ಲಿಫ್ಟ್ ಅನ್ನು ಶೀಘ್ರ ದುರಸ್ತಿಗೊಳಿಸುವಂತೆ ಸೂಚಿಸಿದ ಅವರು, ಆಸ್ಪತ್ರೆ ಆವರಣ ಹಾಗೂ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಆಸ್ಪತ್ರೆಯ ದುರಸ್ತಿಗೆ ಸಂಬಂಧಿಸಿದ ಕ್ರಿಯಾ ಯೋಜನೆಯ ಪ್ರತಿಯನ್ನು ಸಲ್ಲಿಸುವಂತೆ ಸೂಚಿಸಿದ ಅವರು, ಸಿಬ್ಬಂದಿಗಳ ಹಾಜರಾತಿ ವಹಿ, ಔಷಧ ಉಗ್ರಾಣ ಹಾಗೂ ವಿವಿಧ ವಿಭಾಗಗಳನ್ನು ಪರಿಶೀಲಿಸಿದರು.

ಬಳಿಕ ಜಿಲ್ಲಾ ಕ್ರೀಡಾಂಗಣದ ಕ್ರೀಡಾ ವಸತಿ ಶಾಲೆಗೆ ಭೇಟಿ ನೀಡಿದ ಉಪಲೋಕಾಯುಕ್ತರು, ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಊಟ, ಉಪಹಾರ ಮತ್ತು ಕ್ರೀಡಾ ತರಬೇತಿ ಕುರಿತು ಮಾಹಿತಿ ಪಡೆದರು.

ವಿದ್ಯಾರ್ಥಿಗಳೊಂದಿಗೆ ನೇರ ಸಂವಾದ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಿದರು.

ಮಕ್ಕಳು ತಮ್ಮ ಸಮಸ್ಯೆಗಳನ್ನು ಧೈರ್ಯವಾಗಿ ಹೇಳಿಕೊಂಡರೆ ಅವುಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ. ಕ್ರೀಡಾ ಕ್ಷೇತ್ರದ ಸಾಧಕರನ್ನು ಆದರ್ಶವಾಗಿಟ್ಟುಕೊಂಡು ಉತ್ತಮ ಸಾಧನೆ ಮಾಡುವಂತೆ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿದರು.

ಈ ಸಂದರ್ಭದಲ್ಲಿ ಹಿರಿಯ ನ್ಯಾಯಾಧೀಶರು ಹಾಗೂ ಆಪ್ತ ಕಾರ್ಯದರ್ಶಿ ಕಿರಣ್ ಪಿ.ಎಂ. ಪಾಟೀಲ, ಸುನೀಲಕುಮಾರ್ ಆರ್., ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶರಣು ಗೋಗೇರಿ ಉಪಸ್ಥಿತರಿದ್ದರು.

> ಆಸ್ಪತ್ರೆ ಮತ್ತು ಕ್ರೀಡಾ ವಸತಿ ಶಾಲೆಗಳಲ್ಲಿ ಮೂಲಸೌಲಭ್ಯಗಳಿಗೆ ಆದ್ಯತೆ ನೀಡಿ, ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು.
>
> **- ಕೆ.ಎನ್. ಫಣೀಂದ್ರ,** ಉಪಲೋಕಾಯುಕ್ತ ನ್ಯಾಯಮೂರ್ತಿಗಳು

ಸಾವಯವ ಕೃಷಿಯತ್ತ ಹೆಚ್ಚಿದ ಆಸಕ್ತಿ; ವೀರೇಶ ನೇಗಲಿ ಜಮೀನಿನಲ್ಲಿ ನೈಸರ್ಗಿಕ ಕೃಷಿ ಪ್ರಾತ್ಯಕ್ಷಿಕೆ

## ಸಾವಯವ ಕೃಷಿಯೇ ರೈತರ ಲಾಭದ ಹೊಸ ದಾರಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ರಾಸಾಯನಿಕ ಗೊಬ್ಬರ, ಕೀಟನಾಶಕ ಹಾಗೂ ಕೃಷಿ ಪರಿಕರಗಳ ಬೆಲೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಕಡಿಮೆ ವೆಚ್ಚದಲ್ಲಿ ಅಧಿಕ ಇಳುವರಿ ಪಡೆಯುವ ನಿಟ್ಟಿನಲ್ಲಿ ರೈತರು ಸಾವಯವ ಹಾಗೂ ನೈಸರ್ಗಿಕ ಕೃಷಿಯತ್ತ ಮುಖ ಮಾಡುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಲಕ್ಷ್ಮೇಶ್ವರ ತಾಲೂಕಿನ ಮಾಗಡಿ ಗ್ರಾಮದ ರೈತ ಗೋಪಾಲಗೌಡ ಭರಮಗೌಡ್ರ ಅವರು ಕೋಟುಮಚಗಿ ಗ್ರಾಮದ ಪ್ರಗತಿಪರ ಸಾವಯವ ಕೃಷಿಕ ವೀರೇಶ ನೇಗಲಿ ಅವರ ಶ್ರೀ ಹಾನಗಲ್ಲ ಕುಮಾರೇಶ್ವರ ಸಾವಯವ ಕೃಷಿ ನಿವಾಸಕ್ಕೆ ಭೇಟಿ ನೀಡಿ ವಿವಿಧ ಸಾವಯವ ಕೃಷಿ ತಂತ್ರಗಳನ್ನು ವೀಕ್ಷಿಸಿ ಮಾಹಿತಿ ಪಡೆದರು.

ವೀರೇಶ ನೇಗಲಿ ಅವರು ಹಲವು ವರ್ಷಗಳಿಂದ ಅನುಸರಿಸುತ್ತಿರುವ ಬಯೋಚಾರ್, ಚೌಕಮಡಿ ಪದ್ಧತಿ, ಜೀವಾಮೃತ, ಘನ ಜೀವಾಮೃತ, ಗೋ-ಕೃಪಾಮೃತ, ಸಗಣಿ ಸ್ಲರಿ, ಎರೆಹುಳು ಗೊಬ್ಬರ ಹಾಗೂ ಎರೆಜಲ ತಯಾರಿಕೆ ಮತ್ತು ಬಳಕೆಯ ಕುರಿತು ಪ್ರಾಯೋಗಿಕವಾಗಿ ವಿವರಿಸಿದರು. ಗೋಮಯ, ಗೋಮೂತ್ರ ಹಾಗೂ ಕೃಷಿ ತ್ಯಾಜ್ಯಗಳಂತಹ ಸ್ಥಳೀಯ ಸಂಪನ್ಮೂಲಗಳನ್ನು ಬಳಸಿಕೊಂಡು ಜಮೀನಿನಲ್ಲಿಯೇ ಸಾವಯವ ಗೊಬ್ಬರ ಮತ್ತು ಪೋಷಕಾಂಶಯುಕ್ತ ದ್ರಾವಣಗಳನ್ನು ತಯಾರಿಸಬಹುದಾಗಿದೆ. ಇದರಿಂದ ಹೊರಗಿನಿಂದ ಗೊಬ್ಬರ ಖರೀದಿಸುವ ವೆಚ್ಚ ಕಡಿಮೆಯಾಗುವುದರೊಂದಿಗೆ ಕೃಷಿಯ ಲಾಭದಾಯಕತೆಯೂ ಹೆಚ್ಚುತ್ತದೆ ಎಂದು ತಿಳಿಸಿದರು.

ಮಣ್ಣಿನ ಫಲವತ್ತತೆ ಕಾಪಾಡುವಲ್ಲಿ ಬಯೋಚಾರ್ ಪ್ರಮುಖ ಪಾತ್ರ ವಹಿಸುತ್ತದೆ. ಜೀವಾಮೃತ ಮತ್ತು ಘನ ಜೀವಾಮೃತ ಮಣ್ಣಿನಲ್ಲಿನ ಸೂಕ್ಷ್ಮಜೀವಿಗಳ ಬೆಳವಣಿಗೆಗೆ ನೆರವಾಗಿ ಬೆಳೆಗಳ ಬೇರುಗಳನ್ನು ಸದೃಢಗೊಳಿಸುತ್ತವೆ. ಎರೆಹುಳು ಗೊಬ್ಬರ ಮತ್ತು ಎರೆಜಲ ಮಣ್ಣಿಗೆ ಅಗತ್ಯ ಪೋಷಕಾಂಶಗಳನ್ನು ಒದಗಿಸಿ ಇಳುವರಿ ಹೆಚ್ಚಿಸಲು ಸಹಕಾರಿಯಾಗುತ್ತವೆ ಎಂದು ವಿವರಿಸಿದರು.


ನೀರಿನ ಕೊರತೆ ಎದುರಿಸುತ್ತಿರುವ ರೈತರಿಗೆ ಸೆಣಬಿನ ದಾರ ಆಧಾರಿತ ಹನಿ ನೀರಾವರಿ ವ್ಯವಸ್ಥೆ ಕುರಿತು ಪ್ರಾತ್ಯಕ್ಷಿಕೆ ನೀಡಿದ ಅವರು, ಕಡಿಮೆ ನೀರಿನಲ್ಲಿ ಉತ್ತಮ ಫಲಿತಾಂಶ ಪಡೆಯಬಹುದಾದ ಈ ವಿಧಾನ ರೈತರಿಗೆ ಹೆಚ್ಚು ಅನುಕೂಲಕರವಾಗಿದೆ ಎಂದರು.

ಭೇಟಿಯ ಬಳಿಕ ಮಾತನಾಡಿದ ರೈತ ಗೋಪಾಲಗೌಡ ಭರಮಗೌಡ್ರ, ವೀರೇಶ ನೇಗಲಿ ಅವರ ಜಮೀನಿನಲ್ಲಿ ಅಳವಡಿಸಿಕೊಂಡಿರುವ ನೈಸರ್ಗಿಕ ಕೃಷಿ ತಂತ್ರಗಳು ಅತ್ಯಂತ ಉಪಯುಕ್ತವಾಗಿವೆ. ಕಡಿಮೆ ವೆಚ್ಚದಲ್ಲಿ ಉತ್ತಮ ಇಳುವರಿ ಪಡೆಯಲು ಸಾಧ್ಯವಾಗುವ ಈ ವಿಧಾನಗಳನ್ನು ಹಂತ ಹಂತವಾಗಿ ನನ್ನ ಜಮೀನಿನಲ್ಲಿಯೂ ಅಳವಡಿಸಿಕೊಳ್ಳುತ್ತೇನೆ ಎಂದು ತಿಳಿಸಿದರು.

ಪ್ರಗತಿಪರ ಕೃಷಿಕ ವೀರೇಶ ನೇಗಲಿ ಮಾತನಾಡಿ, ರೈತರಿಂದ ರೈತರಿಗೆ ಜ್ಞಾನ ಹಂಚಿಕೆಯೇ ಕೃಷಿಯ ಅಭಿವೃದ್ಧಿಗೆ ಪ್ರಮುಖ ಶಕ್ತಿ. ಮಣ್ಣಿನ ಆರೋಗ್ಯ ಕಾಪಾಡುವುದರೊಂದಿಗೆ ಕೃಷಿ ವೆಚ್ಚ ತಗ್ಗಿಸಿ ರೈತರ ಆದಾಯ ಹೆಚ್ಚಿಸಲು ಸ್ಥಳೀಯ ಸಂಪನ್ಮೂಲ ಆಧಾರಿತ ಸಾವಯವ ಕೃಷಿ ಪದ್ಧತಿಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

> ಸ್ಥಳೀಯ ಸಂಪನ್ಮೂಲಗಳನ್ನು ಬಳಸಿಕೊಂಡು ನೈಸರ್ಗಿಕ ಕೃಷಿ ಅಳವಡಿಸಿಕೊಂಡರೆ ಕೃಷಿ ವೆಚ್ಚ ಕಡಿಮೆಯಾಗಿ, ಮಣ್ಣಿನ ಫಲವತ್ತತೆ ಹೆಚ್ಚುವುದರೊಂದಿಗೆ ರೈತರ ಆದಾಯವೂ ವೃದ್ಧಿಯಾಗುತ್ತದೆ.
>
> **- ವೀರೇಶ ನೇಗಲಿ,** ಪ್ರಗತಿಪರ ಸಾವಯವ ಕೃಷಿಕ

## ಮನೋರಮಾ ಕಾಲೇಜಿನಲ್ಲಿ ರಂಗೋಲಿ ಸ್ಪರ್ಧೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ಪ್ರತಿಷ್ಠಿತ ಮನೋರಮಾ ಕಾಲೇಜಿನಲ್ಲಿ ವಿದ್ಯಾರ್ಥಿನಿಯರ ಪ್ರತಿಭೆಗೆ ವೇದಿಕೆ ಕಲ್ಪಿಸುವ ಉದ್ದೇಶದಿಂದ ರಂಗುರಂಗಿನ ರಂಗೋಲಿ ಸ್ಪರ್ಧೆ ವಿಜೃಂಭಣೆಯಿಂದ ನಡೆಯಿತು.

ಪಿಯುಸಿ ಸಂಯೋಜಕಿ ಪ್ರೊ. ಶಾಹಿದಾ ಶಿರಹಟ್ಟಿ ಅವರ ನೇತೃತ್ವದಲ್ಲಿ ಆಯೋಜಿಸಿದ್ದ ಸ್ಪರ್ಧೆಯಲ್ಲಿ ವಿದ್ಯಾರ್ಥಿನಿಯರು ವಿವಿಧ ಶೈಲಿಯ ಆಕರ್ಷಕ ರಂಗೋಲಿಗಳನ್ನು ಬಿಡಿಸಿ ತಮ್ಮ ಕಲಾತ್ಮಕ ಪ್ರತಿಭೆಯನ್ನು ಅನಾವರಣಗೊಳಿಸಿದರು.

ಬಣ್ಣಬಣ್ಣದ ವಿನ್ಯಾಸಗಳು ನೋಡುಗರ ಗಮನ ಸೆಳೆಯುವುದರೊಂದಿಗೆ ಕಾಲೇಜು ಆವರಣವನ್ನು ಹಬ್ಬದ ವಾತಾವರಣಕ್ಕೆ ಸಾಕ್ಷಿಯನ್ನಾಗಿಸಿತು.

ಸ್ಪರ್ಧೆಯಲ್ಲಿ ದ್ವಿತೀಯ ಪಿಯುಸಿ ವಿಭಾಗದ ಕುಮಾರಿ ತೇಜಸ್ವಿನಿ, ಭೂಮಿಕಾ ಹಾಗೂ ಸಹನಾ ಪ್ರಥಮ ಸ್ಥಾನ, ಪ್ರಥಮ ಪಿಯುಸಿ ವಿಭಾಗದ ಕುಮಾರಿ ದೀಪಾ ಹಾಗೂ ಬಸಮ್ಮ ದ್ವಿತೀಯ ಸ್ಥಾನ, ದ್ವಿತೀಯ ಪಿಯುಸಿ ವಿಭಾಗದ ಕುಮಾರಿ ಗೀತಾ ಕೆ. ಹಾಗೂ ವರ್ಷಾ ತೃತೀಯ ಸ್ಥಾನ ಪಡೆದು ಪ್ರಶಂಸೆಗೆ ಪಾತ್ರರಾದರು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಎನ್.ಎಂ. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಪಿಯುಸಿ ಸಂಯೋಜಕಿ ಪ್ರೊ. ಶಾಹಿದಾ ಶಿರಹಟ್ಟಿ, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಒಂದೇ ಮರಕ್ಕೆ ನೇಣು... ಇಬ್ಬರು ಯುವತಿಯರ ಸಾವಿನ ಹಿಂದಿತ್ತು ಪ್ರೀತಿ!

## ಪೊಲೀಸರ ತನಿಖೆಯಲ್ಲಿ ಬೆಚ್ಚಿಬೀಳಿಸುವ ಸತ್ಯ ಬಹಿರಂಗ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ನಗರದ ಹೊರವಲಯದಲ್ಲಿ ಒಂದೇ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದ ಇಬ್ಬರು ಯುವತಿಯರ ಸಾವಿನ ಪ್ರಕರಣಕ್ಕೆ ಹೊಸ ತಿರುವು ಸಿಕ್ಕಿದೆ. ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ, ಇಬ್ಬರೂ ಪರಸ್ಪರ ಪ್ರೀತಿಸುತ್ತಿದ್ದು, ಒಟ್ಟಿಗೆ ಬದುಕಲು ಸಾಧ್ಯವಾಗದ ನೋವಿನಿಂದ ಈ ದುರ್ಘಟನೆಯ ನಿರ್ಧಾರ ಕೈಗೊಂಡಿರುವ ಶಂಕೆ ವ್ಯಕ್ತವಾಗಿದೆ.



ಮೃತರನ್ನು 22 ವರ್ಷದ ಸಿರ್ಜನಾ ಹಾಗೂ 23 ವರ್ಷದ ರಿತಾ ಎಂದು ಗುರುತಿಸಲಾಗಿದೆ. ಘಟನೆ ಬೆಳಕಿಗೆ ಬಂದ ತಕ್ಷಣ ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಆರಂಭಿಸಿದ್ದು, ಕುಟುಂಬಸ್ಥರು ಮತ್ತು ಆಪ್ತರನ್ನು ವಿಚಾರಣೆ ನಡೆಸಿದ ಬಳಿಕ ಹಲವು ಮಹತ್ವದ ಮಾಹಿತಿ ಲಭ್ಯವಾಗಿದೆ.

ಪೊಲೀಸರ ಪ್ರಕಾರ, ಇಬ್ಬರೂ ಪರಸ್ಪರ ಪ್ರೀತಿಸುತ್ತಿದ್ದು, ಮದುವೆಯಾಗಿ ಒಟ್ಟಿಗೆ ಬದುಕುವ ಆಸೆ ಹೊಂದಿದ್ದರು. ಆದರೆ ತಮ್ಮ ಸಂಬಂಧವನ್ನು ಕುಟುಂಬ ಹಾಗೂ ಸಮಾಜ ಒಪ್ಪಿಕೊಳ್ಳುವುದಿಲ್ಲ ಎಂಬ ಆತಂಕ ಅವರಲ್ಲಿತ್ತು.

ಇದೇ ಮಾನಸಿಕ ಒತ್ತಡದಿಂದ ಇಬ್ಬರೂ ಒಟ್ಟಿಗೆ ಆತ್ಮಹತ್ಯೆಗೆ ಶರಣಾಗಿರುವ ಸಾಧ್ಯತೆಯನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ.

ಸಿರ್ಜನಾ ಮತ್ತು ರಿತಾ ಸಂಬಂಧಿಕರಾಗಿದ್ದು, ನೇಪಾಳದಲ್ಲಿ ಒಟ್ಟಿಗೆ ಓದಿ ಬೆಳೆದಿದ್ದರು. ಬಾಲ್ಯದಿಂದಲೇ ಆತ್ಮೀಯರಾಗಿದ್ದ ಅವರು, ಸದಾ ಒಟ್ಟಿಗೇ ಇರುತ್ತಿದ್ದರು ಎಂದು ಕುಟುಂಬದವರು ತಿಳಿಸಿದ್ದಾರೆ. ಈ ಕಾರಣದಿಂದ ಊರಿನಲ್ಲಿ ಮಾತುಕತೆಗಳು ಆರಂಭವಾಗಿದ್ದ ಹಿನ್ನೆಲೆಯಲ್ಲಿ ಸಂಬಂಧಿಕರು ಅವರನ್ನು ಬೆಂಗಳೂರಿಗೆ ಕರೆಸಿಕೊಂಡಿದ್ದರು.

ಬೆಂಗಳೂರಿಗೆ ಬಂದ ಬಳಿಕವೂ ಇಬ್ಬರೂ ಬೇರೆ ಬೇರೆ ಪ್ರದೇಶಗಳಲ್ಲಿ ವಾಸವಾಗಿದ್ದರೂ ವಾರದಲ್ಲಿ ಹಲವು ಬಾರಿ ಭೇಟಿಯಾಗುತ್ತಿದ್ದರು. ರಿತಾ ಫ್ರೇಜರ್ ಟೌನ್‌ನಲ್ಲಿ ಹಾಗೂ ಸಿರ್ಜನಾ ಜಕ್ಕೂರಿನಲ್ಲಿ ವಾಸವಾಗಿದ್ದರು ಎನ್ನಲಾಗಿದೆ.

ಘಟನೆ ನಡೆದ ದಿನ ಇಬ್ಬರೂ ಸಂಬಂಧಿಕರ ಮನೆಗೆ ಊಟಕ್ಕೆ ಹೋಗಿದ್ದರು.

ಈ ವೇಳೆ ಕುಟುಂಬದವರ ನಡುವೆ ಮದುವೆ ವಿಚಾರ ಪ್ರಸ್ತಾಪವಾಗಿತ್ತು. ನಂತರ ಸಮಾಜ ನಮ್ಮನ್ನು ಒಟ್ಟಿಗೆ ಬದುಕಲು ಬಿಡುವುದಿಲ್ಲ' ಎಂಬ ಆತಂಕವನ್ನು ಅವರು ವ್ಯಕ್ತಪಡಿಸಿದ್ದಾಗಿ ವಿಚಾರಣೆ ವೇಳೆ ತಿಳಿದುಬಂದಿದೆ.

ಇದೇ ಭಾವನಾತ್ಮಕ ಒತ್ತಡ ಆತ್ಮಹತ್ಯೆಯ ನಿರ್ಧಾರಕ್ಕೆ ಕಾರಣವಾಗಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ.

ಪೊಲೀಸರು ಮರಣೋತ್ತರ ಪರೀಕ್ಷೆ ಪೂರ್ಣಗೊಳಿಸಿ ಮೃತದೇಹಗಳನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಿದ್ದಾರೆ. ಪ್ರಕರಣದ ಎಲ್ಲಾ ಆಯಾಮಗಳಲ್ಲೂ ತನಿಖೆ ಮುಂದುವರಿದಿದೆ.

ಸ್ಥಳ ಪರಿಶೀಲನೆ ಕಡ್ಡಾಯ; ರೈತರಿಗೆ ಅನ್ಯಾಯವಾದರೆ ಅಧಿಕಾರಿಗಳೇ ಹೊಣೆ: ರಾಯರಡ್ಡಿ

## ಕಚೇರಿಯಲ್ಲಿ ಕುಳಿತು ವರದಿ ಬೇಡ; ಜಮೀನಿಗೆ ಹೋಗಿ ವಾಸ್ತವ ಸ್ಥಿತಿ ತಿಳಿಯಿರಿ




**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಉಂಟಾಗಿರುವ ತೀವ್ರ ಬರ ಪರಿಸ್ಥಿತಿಯನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು. ಕಚೇರಿಯಲ್ಲಿ ಕುಳಿತು ವರದಿ ತಯಾರಿಸುವ ಬದಲು ರೈತರ ಜಮೀನುಗಳಿಗೆ ತೆರಳಿ ವಾಸ್ತವ ಸ್ಥಿತಿ ಪರಿಶೀಲಿಸಿ ಮಾಹಿತಿ ಸಲ್ಲಿಸಬೇಕು. ಮುಂದಿನ ವಾರ ನಡೆಯುವ ಎರಡನೇ ಹಂತದ ಪರಿಶೀಲನಾ ಸಭೆಯೊಳಗೆ ಸಮರ್ಪಕ ವರದಿ ನೀಡದಿದ್ದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬರ ಪರಿಸ್ಥಿತಿ ಕುರಿತು ಶಾಸಕರು, ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ಸುದೀರ್ಘ ಪರಿಶೀಲನಾ ಸಭೆ ನಡೆಸಿದ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಜೂನ್ 1ರಿಂದ ಆಗಸ್ಟ್ 7ರವರೆಗೆ ಜಿಲ್ಲೆಯಲ್ಲಿ ವಾಡಿಕೆಗಿಂತ ಶೇ.31ರಷ್ಟು ಮಳೆ ಕೊರತೆ ದಾಖಲಾಗಿದ್ದು, ಎನ್‌ಡಿಆರ್‌ಎಫ್ ನಿಯಮಾವಳಿಗಳ ಪ್ರಕಾರ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ಅಗತ್ಯವಾದ ಪರಿಸ್ಥಿತಿ ನಿರ್ಮಾಣವಾಗಿದೆ. ತಾಲೂಕುವಾರು ವೈಜ್ಞಾನಿಕ ಪರಿಶೀಲನೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

**164 ಕೋಟಿ ರೂ. ಬೆಳೆ ಹಾನಿ:** ಪ್ರಾಥಮಿಕ ಅಂದಾಜಿನಂತೆ ಜಿಲ್ಲೆಯಲ್ಲಿ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳು ಸೇರಿ 164 ಕೋಟಿ ರೂ. ಮೌಲ್ಯದ ಬೆಳೆ ಹಾನಿ ಸಂಭವಿಸಿದೆ. ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಶೇ.75ರಷ್ಟು ರೈತರು ವಿಮೆ ಮಾಡಿಸಿದ್ದು, ಶೇ.80ರಷ್ಟು ಬೆಳೆ ಹಾನಿಯಾಗಿರುವ ಸಾಧ್ಯತೆಯಿದೆ. ವಿಮಾ ಕಂಪನಿಗಳ ಮೂಲಕ ರೈತರಿಗೆ ಶೀಘ್ರ ಪರಿಹಾರ ದೊರಕಿಸುವ ಕ್ರಮ ಕೈಗೊಳ್ಳಲಾಗುವುದು ಎಂದರು.

ವಿಮೆ ಮಾಡಿಸದ ರೈತರಿಗೆ ಎಸ್‌ಡಿಆರ್‌ಎಫ್ ನಿಯಮಾವಳಿಗಳಡಿ ಪರಿಹಾರ ನೀಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಹೇಳಿದರು.

**ಕುಡಿಯುವ ನೀರು, ಉದ್ಯೋಗಕ್ಕೂ ಆದ್ಯತೆ**

ಡಿಬಿಒಟಿ ಯೋಜನೆಯಡಿ ಕುಡಿಯುವ ನೀರು ಪೂರೈಕೆಯಲ್ಲಿ ಕಂಡುಬಂದಿರುವ ಲೋಪಗಳನ್ನು ತಕ್ಷಣ ಸರಿಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ವಿಬಿಜಿ ರಾಮ್‌ಜಿ ಯೋಜನೆಯಡಿ ಈಗಾಗಲೇ 18 ಸಾವಿರಕ್ಕೂ ಹೆಚ್ಚು ಮಾನವ ದಿನಗಳು ಸೃಷ್ಟಿಯಾಗಿದ್ದು, ಕೂಲಿ ಕಾರ್ಮಿಕರಿಗೆ ಕೆಲಸದ ಕೊರತೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ಸದ್ಯ ಮೇವು ಕೊರತೆ ಇಲ್ಲ. ಅಗತ್ಯವಿದ್ದರೆ ತಕ್ಷಣ ಗೋಶಾಲೆಗಳನ್ನು ತೆರೆಯಲು ಜಿಲ್ಲಾಧಿಕಾರಿಗಳಿಗೆ ಸಂಪೂರ್ಣ ಅಧಿಕಾರ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶಾಸಕ ಎಚ್.ಕೆ. ಪಾಟೀಲ, ಶಾಸಕ ಡಾ. ಚಂದ್ರು ಲಮಾಣಿ, ಹೆಸ್ಕಾಂ ಅಧ್ಯಕ್ಷ ಅಜ್ಜಂಪೀರ್ ಖಾದ್ರಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ್ ಕೆ. ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಕಚೇರಿಯಲ್ಲಿ ಕುಳಿತು ವರದಿ ತಯಾರಿಸಬೇಡಿ; ಜಮೀನಿಗೆ ಹೋಗಿ ರೈತರ ಸಮ್ಮುಖದಲ್ಲೇ ವಾಸ್ತವ ಸ್ಥಿತಿ ಪರಿಶೀಲಿಸಿ. ನಿರ್ಲಕ್ಷ್ಯ ತೋರಿದರೆ ಶಿಸ್ತುಕ್ರಮ ಅನಿವಾರ್ಯ.
>
> **- ಬಸವರಾಜ ರಾಯರಡ್ಡಿ,** ಉಸ್ತುವಾರಿ ಸಚಿವ

## ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಬಸವರಾಜ ಹೊರಟ್ಟಿ ರಾಜೀನಾಮೆ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕರ್ನಾಟಕ ವಿಧಾನ ಪರಿಷತ್ ರಾಜಕೀಯದಲ್ಲಿ ಮಹತ್ವದ ಬೆಳವಣಿಗೆ ನಡೆದಿದೆ. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಮ್ಮ ಸ್ಥಾನಕ್ಕೆ ಅಧಿಕೃತವಾಗಿ ರಾಜೀನಾಮೆ ಸಲ್ಲಿಸಿದ್ದು, ರಾಜ್ಯ ರಾಜಕೀಯದಲ್ಲಿ ನಡೆದಿದ್ದ ಹಲವು ದಿನಗಳ ಹೈಡ್ರಾಮಾಗಳಿಗೆ ತೆರೆ ಬಿದ್ದಿದೆ.

ಈ ಮೊದಲು ಮುಂಗಾರು ಅಧಿವೇಶನ ಆರಂಭವಾದ ಬಳಿಕ, ಅಂದರೆ ಆಗಸ್ಟ್ 14ರಂದು ಸಭಾಪತಿ ಸ್ಥಾನ ತೊರೆಯುವುದಾಗಿ ಹೊರಟ್ಟಿ ಘೋಷಿಸಿದ್ದರು. ಆದರೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ನಡೆಸಿದ ಸುದೀರ್ಘ ಮಾತುಕತೆ ಮತ್ತು ಮನವೊಲಿಕೆ ಬಳಿಕ ಅವರು ನಿರ್ಧಾರ ಬದಲಿಸಿ ತಕ್ಷಣವೇ ರಾಜೀನಾಮೆ ಸಲ್ಲಿಸಿದ್ದಾರೆ.

ತಮ್ಮ ರಾಜೀನಾಮೆ ಪತ್ರದಲ್ಲಿ ಯಾವುದೇ ಒತ್ತಡ ಅಥವಾ ಬಲವಂತವಿಲ್ಲದೆ, ಸಂಪೂರ್ಣ ಸ್ವಇಚ್ಛೆಯಿಂದ ಈ ನಿರ್ಧಾರ ಕೈಗೊಂಡಿದ್ದೇನೆ ಎಂದು ಹೊರಟ್ಟಿ ಸ್ಪಷ್ಟಪಡಿಸಿದ್ದಾರೆ. ನೂತನ ಸಭಾಪತಿ ಆಯ್ಕೆಯಾಗುವವರೆಗೆ ಹಂಗಾಮಿ ಸಭಾಪತಿಯಾಗಿ ಮುಂದುವರಿಯಲಿದ್ದಾರೆ.

ವಿಧಾನ ಪರಿಷತ್‌ನಲ್ಲಿ ಕಾಂಗ್ರೆಸ್‌ಗೆ ಸಂಖ್ಯಾಬಲ ಹೆಚ್ಚಿರುವ ಹಿನ್ನೆಲೆಯಲ್ಲಿ ಸಭಾಪತಿ ಸ್ಥಾನಕ್ಕೆ ಸಲೀಂ ಅಹ್ಮದ್ ಹಾಗೂ ಉಪಸಭಾಪತಿ ಸ್ಥಾನಕ್ಕೆ ಉಮಾಶ್ರೀ ಅವರ ಹೆಸರನ್ನು ಕಾಂಗ್ರೆಸ್ ವರಿಷ್ಠರು ಅಂತಿಮಗೊಳಿಸಿರುವ ಮಾಹಿತಿ ಲಭ್ಯವಾಗಿದೆ. ಮುಂದಿನ ದಿನಗಳಲ್ಲಿ ಈ ಆಯ್ಕೆ ಪ್ರಕ್ರಿಯೆಗೆ ಅಧಿಕೃತ ರೂಪ ಸಿಗುವ ಸಾಧ್ಯತೆ ಇದೆ.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka